ಕನ್ನಡಪ್ರಭ
ಸೋಮವಾರ 4.05.2026

ಹೆಚ್ಚಿನ ಸುದ್ದಿ ಪುಟ 09ರಲ್ಲಿ

ಗರಿಷ್ಠ 34°c | ಕನಿಷ್ಠ 23°c


ಸುದ್ದಿ ಸಿಂಚನ

ಅನಧಿಕೃತ ಹೋಂಸ್ಟೇಗಳ ಕಾರ್ಯ ಸ್ಥಗಿತಕ್ಕೆ ಸೂಚನೆ

ದೊಡ್ಡಬಳ್ಳಾಪುರ: ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಪರವಾನಗಿ ಪಡೆಯದೆ ಇರುವ ಹೋಂಸ್ಟೇಗಳು ಚಟುವಟಿಕೆಗಳನ್ನು ಕೂಡಲೇ ಸ್ಥಗಿತಗೊಳಿಸಲು ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿ ಸಹಾಯಕ ನಿರ್ದೇಶಕರು ಹಾಗೂ ಸದಸ್ಯ ಕಾರ್ಯದರ್ಶಿಗಳು ಸೂಚನೆ ನೀಡಿದ್ದಾರೆ. ಜಿಲ್ಲೆಯಲ್ಲಿ ಪ್ರವಾಸೋದ್ಯಮ ಚಟುವಟಿಕೆಗಳು ದಿನೇದಿನೇ ಹೆಚ್ಚಾಗುತ್ತಿದ್ದು, ಜಿಲ್ಲೆಯ ವಿವಿಧ ತಾಲೂಕುಗಳಲ್ಲಿ ಅನೇಕ ಹೋಂಸ್ಟೇಗಳು ಕಾರ್ಯ ನಿರ್ವಹಿಸುತ್ತಿವೆ. ಪ್ರವಾಸಿಗರ ಸುರಕ್ಷತೆ, ಗುಣಮಟ್ಟದ ಸೇವೆ, ಕಾನೂನುಬದ್ಧ ನಿರ್ವಹಣೆ ಹಾಗೂ ಪ್ರವಾಸೋದ್ಯಮ ಕ್ಷೇತ್ರದ ಸಮಗ್ರ ಅಭಿವೃದ್ಧಿ ದೃಷ್ಟಿಯಿಂದ ಕರ್ನಾಟಕ ಪ್ರವಾಸೋದ್ಯಮ ವ್ಯಾಪಾರ (ಸೌಲಭ್ಯ ಮತ್ತು ನಿಯಂತ್ರಣ) ಅಧಿನಿಯಮ-2015ರನ್ವಯ ಕಡ್ಡಾಯವಾಗಿ ಹೋಂಸ್ಟೇಗಳು ಪ್ರವಾಸೋದ್ಯಮ ಇಲಾಖೆ ಅಡಿಯಲ್ಲಿ ನೋಂದಣಿ ಮಾಡಿಕೊಳ್ಳಬೇಕು. ನೋಂದಣಿ ಪತ್ರ ಪಡೆಯದೇ ಕಾರ್ಯನಿರ್ವಹಿಸುತ್ತಿರುವ ಹೋಂಸ್ಟೇ ಮಾಲೀಕರು ಜಿಲ್ಲಾ ಪ್ರವಾಸೋದ್ಯಮ ಇಲಾಖೆಗೆ ಅಗತ್ಯ ದಾಖಲಾತಿಗಳನ್ನು ಸಲ್ಲಿಸಿ ನೋಂದಣಿ ಮಾಡಿಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ದೂ: 08022040633 ಇಲ್ಲಿಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಆಕಾಶ್ ಇಂಟರ್ ನ್ಯಾಷನಲ್ ಶಾಲೆಗೆ ಶೇ.100 ಫಲಿತಾಂಶ


ಮನ್ವಿ


ಅಭಯ್ ಗೌಡ


ಪುಣ್ಯಸಿರಿ


ವಿಷ್ಣುಗೌಡ

ದೇವನಹಳ್ಳಿ: ಪಟ್ಟಣದ ಪ್ರಸನ್ನಹಳ್ಳಿ ರಸ್ತೆಯಲ್ಲಿರುವ ಆಕಾಶ್ ಇಂಟರ್‌ನ್ಯಾಶನಲ್ ಶಾಲೆಗೆ ಐಸಿಎಸ್‌ಇ ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ಶೇ.100 ಫಲಿತಾಂಶ ಬಂದಿದೆ. ಅಭಯ್.ಆರ್.ಗೌಡ(ಶೇ.88), ಪುಣ್ಯಸಿರಿ. ಜೆ(ಶೇ.84) ಮನ್ವಿ.ವಿ (ಶೇ.82), ವಿಷ್ಣುಗೌಡ.ಎನ್ (ಶೇ.81), ಶಿರಾಜ್ ತೇಜ್.ಕೆ (ಶೇ. 76) ನಿತಿನ್‌ಗೌಡ (ಶೇ.71) ಎನ್.ಶಶಾಂಕ್ (ಶೇ.67), ವೈಶಾಲಿ.ಎಸ್ (ಶೇ.64), ಇಂದುಶ್ರೀ.ಸಿ.ಎಚ್(ಶೇ.63), ಜತಿನ್. ಆರ್(ಶೇ.63), ಪಡೆದಿದ್ದಾರೆ. ಆಕಾಶ್ ಇಂಟರ್ ನ್ಯಾಷನಲ್ ಶಾಲೆಯ ಸಂಸ್ಥಾಪಕ ಅಧ್ಯಕ್ಷ ಡಾ. ಮುನಿರಾಜು, ಶಾಲೆ ಐಸಿಎಸ್‌ಸಿ 10ನೇ ತರಗತಿಯ ಎಲ್ಲಾ ವಿದ್ಯಾರ್ಥಿಗಳಿಗೆ ಅಭಿನಂದನೆ ಸಲ್ಲಿಸಿದ್ದಾರೆ.

ದೇಗುಲ ಉದ್ಘಾಟನೆ ಇಂದು

ಸೂಲಿಬೆಲೆ: ಇಲ್ಲಿನ ಪಂಚ ದೇವಾಲಯಗಳ ಆವರಣದಲ್ಲಿರುವ ವೇಣುಗೋಪಾಲಸ್ವಾಮಿ, ಲಕ್ಷ್ಮೀನರಸಿಂಹ ಸ್ವಾಮಿ ಮತ್ತು ನವಗ್ರಹಗಳ ದೇವಾಲಯಗಳ ಪ್ರತಿ ಷ್ಠಾಪನೆ ಹಾಗೂ ಉದ್ಘಾಟನಾ ಮಹೋತ್ಸವ ಮೇ 4ರಂದು ಸೋಮವಾರ ನೆರವೇರಲಿದೆ. ವಿಜಯಪುರ ಮಠದ ಮಹದೇವ ಸ್ವಾಮೀಜಿ, ನಾಗಲಪುರ ಮಠದ ತೇಜಲಿಂಗ ಸ್ವಾಮೀಜಿ ಸಾನ್ನಿಧ್ಯ ವಹಿಸಲಿದ್ದಾರೆ. ಹಿರಿಯ ಮುಖಂಡರಾದ ಗೋಪಾಲಗೌಡ, ಯುವ ಮುಖಂಡ ನಾರಾಯಣಗೌಡ ಇತರರು ಪಾಲ್ಗೊಳ್ಳಲಿದ್ದಾರೆ ಎಂದು ವ್ಯವಸ್ಥಾಪಕ ಸೂ.ಚಿ.ಬಸವರಾಜಪ್ಪ ತಿಳಿಸಿದ್ದಾರೆ.



ದಾಬಸ್‌ಪೇಟೆ ಪಟ್ಟಣದ ನಾಟ್ಯರ್ಪಣಾ ಸಾಂಸ್ಕೃತಿಕ ಅಕಾಡೆಮಿಯ ವಿದ್ಯಾರ್ಥಿಗಳು ಮಂತ್ರಾಲಯದ ರಾಘವೇಂದ್ರ ಸ್ವಾಮಿ ಮಠದಲ್ಲಿ 1008 ಶ್ರೀ ಸುಭೇಂದ್ರ ತೀರ್ಥ ಸ್ವಾಮೀಜಿಯವರ ಸಾನ್ನಿಧ್ಯದಲ್ಲಿ ಹಮ್ಮಿಕೊಂಡಿದ್ದ ಭರತನಾಟ್ಯ ಪ್ರದರ್ಶನದಲ್ಲಿ ಭಕ್ತರನ್ನು ರಂಜಿಸಿದರು.

ಅದ್ದೂರಿ ಕರಗೋತ್ಸವ

ಕನಕಪುರ: ಇಲ್ಲಿಯ ದ್ರೌಪತಮ್ಮ-ಧರ್ಮರಾಯ ಸ್ವಾಮಿ ಕರಗ ಮಹೋತ್ಸವ ಅದ್ದೂರಿಯಾಗಿ ನೆರವೇರಿತು. ಪ್ರತಿವರ್ಷ ವೈಶಾಖ ಹುಣ್ಣಿಮೆಯಂದು ಜರುಗುವ ಕರಗ ಮಹೋತ್ಸವದಲ್ಲಿ ವಹ್ನಿ ಕುಲ ಬಂಧುಗಳು ದೇವಾಲಯದಲ್ಲಿ ವಿಶೇಷಪೂಜೆ ನೆರವೇರಿಸಿದ ಬಳಿಕ ಹೂವಿನಿಂದ ಅಲಂಕೃತಗೊಂಡ ಕಳಸದ ಕರಗ ಹೊತ್ತ ಪ್ರಧಾನ ಅರ್ಚಕರು ಊರಿನ ಪ್ರಮುಖ ಬಡಾವಣೆ ಗಳಲ್ಲಿ ಸಂಚರಿಸಿ ಆಕರ್ಷಕ ನೃತ್ಯ ಪ್ರದರ್ಶನ ನೀಡುವರು. ಪೂರ್ಣಕುಂಭ ಕರಗ ಹೊತ್ತು ತಮ್ಮ ತಮ್ಮ ಬಡಾವಣೆಗೆ ಆಗಮಿಸಿದ ಹೂವಿನ ಕರಗಕ್ಕೆ ಮನೆಯ ಮುಂದೆ ನಗರದ ಸಾರ್ವಜನಿಕರು ರಂಗೋಲಿ ಹಾಕಿ ಸ್ವಾಗತಿಸಿ ಮಂಗಳಾರತಿ ಎತ್ತಿ ತಮ್ಮ ಭಕ್ತಿ ಮೆರೆದರು. ನಗರಾದ್ಯಂತ ರಸ್ತೆ ಇಕ್ಕೆಲಗಳಲ್ಲಿ ಬಣ್ಣಬಣ್ಣದ ದೀಪಗಳಿಂದ ಅಲಂಕರಿಸಿ ಮೆರವಣಿಗೆ ಉದ್ದಕ್ಕೂ ಜಯಘೋಷಗಳನ್ನು ಕೂಗಿದರು.



ಜಿಲ್ಲೆಯಲ್ಲಿ 47 ಸಾವಿರ ರೈತರಿಗಿಲ್ಲ ಎಫ್‌ಐಡಿ ಸಂಖ್ಯೆ

ಕಾಳಸಂತೆಯಲ್ಲಿ ರಸಗೊಬ್ಬರ ಮಾರಾಟಕ್ಕೆ ಕಡಿವಾಣ ಹಾಕಲು ಕಟ್ಟುನಿಟ್ಟಿನ ನಿಯಮ | ರಸಗೊಬ್ಬರ ಖರೀದಿಗೆ ಎಫ್‌ಐಡಿ ಕಡ್ಡಾಯ

• **ಎಂ.ಅಫ್ರೋಜ್ ಖಾನ್**
ಕನ್ನಡಪ್ರಭ ವಾರ್ತೆ ರಾಮನಗರ

ಕಾಳಸಂತೆಯಲ್ಲಿ ರಸಗೊಬ್ಬರ ಮಾರಾಟಕ್ಕೆ ಕಡಿವಾಣ ಹಾಕುವ ನಿಟ್ಟಿನಲ್ಲಿ ಕೃಷಿ ಇಲಾಖೆ ಫ್ರೂಟ್ಸ್(ರೈತ ನೋಂದಣಿ ಮತ್ತು ಏಕೀಕೃತ ಫಲಾನುಭವಿ ಮಾಹಿತಿ ವ್ಯವಸ್ಥೆ) ಅಥವಾ ಎಫ್‌ಐಡಿ(ಫಾರ್ಮರ್‌ಐಡೆಂಟಿಫಿಕೇಷನ್ ನಂಬರ್) ಮೂಲಕ ರೈತರ ಜಮೀನಿನ ವಿಸ್ತೀರ್ಣದ ಆಧಾರದ ಮೇಲೆ ರಸಗೊಬ್ಬರ ವಿತರಣೆಗೆ ಮುಂದಾಗಿದೆ. ಆದರೆ, ಬೆಂಗಳೂರು ದಕ್ಷಿಣ ಜಿಲ್ಲೆಯಲ್ಲಿ 47,537 ರೈತರಿಗೆ ಎಫ್‌ಐಡಿ ಸಂಖ್ಯೆಯೇ ಇಲ್ಲ.

ರೈತರಿಗೆ ಅಗತ್ಯವಾಗಿರುವ ರಸಗೊಬ್ಬರಗಳು ಕಡಿಮೆ ಬೆಲೆಗೆ ರೈತರಿಗೆ ದೊರೆಯುವಂತೆ ಮಾಡುವ ಉದ್ದೇಶದಿಂದ ಕೇಂದ್ರ ಸರ್ಕಾರ ಸಬ್ಸಿಡಿ ದರದಲ್ಲಿ ಪೂರೈಕೆ ಮಾಡುತ್ತಿದೆ. ಆದರೆ, ಸಹಾಯಧನದ ರಸಗೊಬ್ಬರಗಳನ್ನು ಕೃಷಿಯೇತರ ಚಟುವಟಿಕೆಗಳಿಗೆ ಬಳಕೆ ಮಾಡಲು ರೈತರ ಹೆಸರಿನಲ್ಲಿ ಖರೀದಿಸಿ ಕಾಳಸಂತೆಯಲ್ಲಿ ಮಾರಾಟ ಮಾಡುತ್ತಿರುವುದು ಬೆಳಕಿಗೆಬರುತ್ತಲೇ ಇದೆ. ಆದ್ದರಿಂದ ಇದಕ್ಕೆ ಕಡಿವಾಣ ಹಾಕಲು ಎಫ್ ಐಡಿ ಸಂಖ್ಯೆಯನ್ನು ಕಡ್ಡಾಯಗೊಳಿಸಿ ಕಟ್ಟುನಿಟ್ಟಿನ ನಿಯಮ ಜಾರಿಗೊಳಿಸಲಾಗಿದೆ.

ಎಫ್‌ಐಡಿಯಲ್ಲಿ ರೈತರ ಸಂಪೂರ್ಣ ಮಾಹಿತಿ: ಜಮೀನು ಹೊಂದಿರುವ ರೈತರಿಗೆ ಕೃಷಿ ಸೇರಿದಂತೆ ಇದಕ್ಕೆ ಪೂರಕವಾದ ಇಲಾಖೆಯಿಂದ ಎಫ್‌ಐಡಿ ಕೊಡಲಾಗಿದೆ. ಇದಕ್ಕೆ ಆರ್‌ಟಿಸಿ, ಆಧಾರ್, ಬ್ಯಾಂಕ್ ಖಾತೆ ಸಂಖ್ಯೆ ಹಾಗೂ ಮೊಬೈಲ್ ನಂಬರ್‌ಲಿಂಕ್ ಆಗಿರಲಿದೆ. ಎಫ್‌ಐಡಿಯಲ್ಲಿ ರೈತರ ಜಮೀನಿನ ಪೂರ್ಣ ಮಾಹಿತಿ ಲಭ್ಯವಾಗುತ್ತದೆ. ಅದರಂತೆ ಇದರ ಆಧಾರದಲ್ಲಿ ಅಂದರೆ ರೈತರಿಗೆ ಎಷ್ಟು ಪ್ರಮಾಣದ ಜಮೀನಿದೆ. ಯಾವ ಬೆಳೆ ಹಾಕುತ್ತಾರೆ ಎನ್ನುವ ಮಾಹಿತಿ ಮೇರೆಗೆ ರಸ ಗೊಬ್ಬರ ವಿತರಣೆ ಮಾಡಲು ಯೋಜನೆ ರೂಪಿಸಲಾಗಿದೆ. ಮೊದಲೆಲ್ಲ ರೈತರು ಎಷ್ಟು ಬೇಕಾದರೂ ಖರೀದಿಸುತ್ತಿದ್ದರು. ಆದರೀಗ ಅಗತ್ಯಕ್ಕಿಂತ ಹೆಚ್ಚು ಖರೀದಿಸುವಂತಿಲ್ಲ.

ಎರಡು ಲಕ್ಷ ರೈತರು: ಕೃಷಿ ಇಲಾಖೆ ಮಾಹಿತಿ ಪ್ರಕಾರ 2011ರ ಗಣತಿಯಂತೆ ಜಿಲ್ಲಾದ್ಯಂತ 2,00,460 ರೈತರಿದ್ದಾರೆ. ಇವರಲ್ಲಿ 1,52,923 ರೈತರು ಮಾತ್ರ ಎಫ್‌ಐಡಿ ಸಂಖ್ಯೆ ಹೊಂದಿದ್ದಾರೆ. ಉಳಿದ 47,537 ರೈತರು ಎಫ್‌ಐಡಿ ನೋಂದಣಿಯಾಗಿಲ್ಲ. ಇದರಿಂದ ನೋಂದಣಿಯಾಗದ ರೈತರಿಗೆ ರಸಗೊಬ್ಬರ ಸಿಗುವುದಿಲ್ಲ. ಆದ್ದರಿಂದ ರೈತರು ಅಗತ್ಯ ದಾಖಲಾತಿಗಳನ್ನು ನೀಡಿ ಎಫ್‌ಐಡಿ ನೋಂದಾಯಿಸಿ ಗುರುತಿನ ಸಂಖ್ಯೆ ಪಡೆಯುವುದು ಕಡ್ಡಾಯವಾಗಿದೆ.

ರಸಗೊಬ್ಬರ ಬೇಡಿಕೆ ವಿವರ: ಪ್ರತಿ ವರ್ಷ ಜಿಲ್ಲೆಯಲ್ಲಿ 95,600 ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ಮಾಡುವ ಗುರಿ ಕೃಷಿ ಇಲಾಖೆ ಇರಿಸಿಕೊಳ್ಳುತ್ತದೆ. 2026ರ ಮುಂಗಾರಿಗೆ 28,287 ಮೆಟ್ರಿಕ್ ಟನ್ ರಸಗೊಬ್ಬರ ಅಗತ್ಯವಿದ್ದು, ಇದರಲ್ಲಿ ಏಪ್ರಿಲ್ ತಿಂಗಳಲ್ಲಿ 6302 ಮೆಟ್ರಿಕ್ ಟನ್ ರಸಗೊಬ್ಬರ ಸರಬರಾಜಾಗಿದೆ.

ಡಿಎಪಿ 1704 ಮೆಟ್ರಿಕ್ ಟನ್ ಪೈಕಿ 584, ಕಾಂಪ್ಲೆಕ್ಸ್ 5797 ಮೆಟ್ರಿಕ್ ಟನ್ ಪೈಕಿ 2046, ಎಂಒಪಿ 448 ಮೆಟ್ರಿಕ್ ಟನ್ ಪೈಕಿ 192, ಯೂರಿಯಾ 19,562 ಮೆಟ್ರಿಕ್ ಟನ್ ಪೈಕಿ 3204, ಎಸ್ ಎಸ್ ಪಿ 776 ಮೆಟ್ರಿಕ್ ಟನ್ ಪೈಕಿ 277 ಮೆಟ್ರಿಕ್ ಟನ್ ಪೂರೈಕೆಯಾಗಿದೆ.


ಸಾಂದರ್ಭಿಕ ಚಿತ್ರ.

ಎಫ್‌ಐಡಿ ಪರಿಶೀಲಿಸಿ ರಸಗೊಬ್ಬರ ಮಾರಾಟ ಮಾಡುವಂತೆ ಸೂಚನೆ

ರಸಗೊಬ್ಬರ ಸೇರಿದಂತೆ ಕೃಷಿ ಪರಿಕರ ಮಾರಾಟಗಾರರಿಗೂ ಕೆಲ ನಿಬಂಧನೆ ವಿಧಿಸಲಾಗಿದೆ. ಅದರಂತೆ ರೈತರ ಎಫ್‌ಐಡಿ ಪರಿಶೀಲಿಸಿ ನಿಗದಿತ ಪ್ರಮಾಣದಲ್ಲಿ ರಸಗೊಬ್ಬರವನ್ನು ಕೆ-ಕಿಸಾನ್ ತಂತ್ರಾಂಶದ ಮೂಲಕ ವಿತರಿಸಬೇಕು. ಕಡ್ಡಾಯವಾಗಿ ತಮ್ಮ ಮಳಿಗೆಯ ಸೂಚನಾ ಫಲಕದಲ್ಲಿ ರಸಗೊಬ್ಬರ ದರಪಟ್ಟಿ ಪ್ರದರ್ಶಿಸಬೇಕು. ಗರಿಷ್ಠ ಮಾರಾಟ ದರ ಮೀರದಂತೆ ರಸಗೊಬ್ಬರ ನಿಯಂತ್ರಣ ಆದೇಶ 1985ರ ವಿವಿಧ ಮಾನದಂಡಗಳನ್ವಯ ವಿತರಿಸುವಂತೆ ಮಾರಾಟಗಾರರಿಗೆ ಸೂಚಿಸಲಾಗಿದೆ.

ಎಲ್ಲೆಲ್ಲಿ ಎಫ್‌ಐಡಿ ಸಂಖ್ಯೆ ನೋಂದಣಿ

ಇನ್ನು ರೈತರು ಎಫ್‌ಐಡಿ ಹೊಂದಿರದೇ ಇದ್ದಲ್ಲಿ ಹತ್ತಿರದ ರೈತ ಸಂಪರ್ಕ ಕೇಂದ್ರ / ತೋಟಗಾರಿಕೆ ಇಲಾಖೆ / ಕಂದಾಯ ಇಲಾಖೆ / ರೇಷ್ಮೆ ಇಲಾಖೆ, ಕೃಷಿ ಪತ್ತಿನ ಸಹಕಾರ ಸಂಘ, ಹಾಲು ಉತ್ಪಾದಕರ ಸಂಘಗಳಿಗೆ ಭೇಟಿ ನೀಡಿ ಮಾಡಿಸಿಕೊಳ್ಳಬೇಕು. ಎಫ್‌ಐಡಿ ಸಂಖ್ಯೆ ಹೊಂದಲು ಅವಶ್ಯಕ ದಾಖಲಾತಿಗಳಾದ ಆಧಾರ್‌ಪ್ರತಿ, ಬ್ಯಾಂಕ್ ಪಾಸ್ ಪುಸ್ತಕ, ಮೊಬೈಲ್‌ಸಂಖ್ಯೆ ಮತ್ತು ಚಾಲ್ತಿಯಿರುವ ಆರ್‌ಟಿಸಿ, ರೈತರ ಎಲ್ಲ ಜಮೀನಿನ ಪಹಣಿ ಸಹ ಎಫ್‌ಐಡಿಗೆ ಕಡ್ಡಾಯವಾಗಿ ಸೇರ್ಪಡೆಗೊಳಿಸಬೇಕಾಗಿದೆ.

ಕಾಳಸಂತೆಯಲ್ಲಿ ರಸಗೊಬ್ಬರ ಮಾರಾಟಕ್ಕೆ ಕಡಿವಾಣ ಹಾಕಲು ಎಫ್‌ಐಡಿ ಸಂಖ್ಯೆಯ ಆಧಾರದ ಮೇಲೆ ವಿತರಣೆಗೆ ಕ್ರಮ ವಹಿಸಲಾಗಿದೆ. ಅದರಂತೆ ರಸಗೊಬ್ಬರ ಖರೀದಿಸಲು ಎಫ್‌ಐಡಿ ಕಡ್ಡಾಯ. ಜಿಲ್ಲೆಯಲ್ಲಿ ಎಫ್‌ಐಡಿ ಇಲ್ಲದ ರೈತರು ಕೂಡಲೇ ಅಗತ್ಯ ದಾಖಲಾತಿಗಳನ್ನು ನೀಡಿ ಎಫ್‌ಐಡಿ ಸಂಖ್ಯೆ ಪಡೆಯಬೇಕು.

• **ಅಂಬಿಕಾ** ಜಂಟಿ ಕೃಷಿ ನಿರ್ದೇಶಕ, ಬೆಂಗಳೂರು ದಕ್ಷಿಣ ಜಿಲ್ಲೆ

ಹಿಡುವಳಿದಾರರು ಮತ್ತು ಎಫ್‌ಐಡಿ ಹೊಂದಿರುವ ರೈತರ ವಿವರ

ತಾಲೂಕು	2011ರ ಗಣತಿ ಹಿಡುವಳಿದಾರರು	ಎಫ್‌ಐಡಿ ರೈತರು	ಎಫ್‌ಐಡಿ ಇಲ್ಲದ ರೈತರು
ಚನ್ನಪಟ್ಟಣ	39,738	36,737	3,001
ಕನಕಪುರ	53,755	36,538	17,217
ಹಾರೋಹಳ್ಳಿ	27,870	15,947	11,923
ಮಾಗಡಿ	41,584	35,127	6,457
ರಾಮನಗರ	37,513	28,574	8,939
ಒಟ್ಟು	2,00,460	1,52,923	47,537

ಮಹನೀಯರ ಆಶಯ ಸಮಾಜಕ್ಕೆ ತಿಳಿಸಬೇಕಿದೆ

ತಹಸೀಲ್ದಾರ್‌ಸೋಮಶೇಖರ್‌ಅಭಿಮತ | ತಾಲೂಕು ಆಡಳಿತದಿಂದ ಬುದ್ಧ ಪೌರ್ಣಿಮೆ ಕಾರ್ಯಕ್ರಮ

• **ಕನ್ನಡಪ್ರಭ ವಾರ್ತೆ** ಹೊಸಕೋಟೆ

ಮಹನೀಯರ ಜಯಂತಿಗಳನ್ನು ಆಚರಣೆ ಮೂಲಕ ಅವರ ಆಶಯಗಳನ್ನು ಸಮಾಜಕ್ಕೆ ತಿಳಿಸುವ ಕೆಲಸ ಆಗಬೇಕು ಎಂದು ತಹಸೀಲ್ದಾರ್‌ಸೋಮಶೇಖರ್‌ತಿಳಿಸಿದರು.

ನಗರದ ತಾಲೂಕು ಕಚೇರಿ ಆವರಣದಲ್ಲಿರುವ ಅಂಬೇಡ್ಕರ್‌ಮೂರ್ತಿ ಬಳಿ ತಾಲೂಕು ಆಡಳಿತ ಮತ್ತು ಸಮಾಜ ಕಲ್ಯಾಣ ಇಲಾಖೆ ಸಹಯೋಗದಲ್ಲಿ ಆಯೋಜಿಸಿದ್ದ ಬುದ್ಧ ಪೂರ್ಣಿಮೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಜಯಂತಿಗಳನ್ನು ಆಚರಿಸುವ ಉದ್ದೇಶ ಅವರ ಆಶಯಗಳನ್ನು ಜನಸಾಮಾನ್ಯರಿಗೆ ತಿಳಿಸುವುದಕ್ಕಾಗಿಯೇ ಹೊರತು ಸಂಭ್ರಮ ಸಡಗರಕ್ಕಾಗಿಯಲ್ಲ. ಶಾಂತಿ ಬೋಧನೆ ಮಾಡಿದ ಗೌತಮ ಬುದ್ಧರು ಸಮಾಜಕ್ಕೆ ದೊಡ್ಡ ಸಂದೇಶವನ್ನು ನೀಡಿದರು. ಮನುಜ ಕುಲದಲ್ಲಿ ಹುಟ್ಟಿರುವ ನಾವು ಶಾಂತಿ ಸಂದೇಶವನ್ನು ಅರ್ಥ ಮಾಡಿಕೊಳ್ಳಬೇಕಿದೆ ಎಂದರು.

ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ಸಿದ್ದರಾಜು ಮಾತನಾಡಿ, ಕ್ರಿ.ಪೂ.ದಲ್ಲೇ ಸಾಮ್ರಾಟ್ ಅಶೋಕ ಮಹಾಶಯನಾಗಲು ಬುದ್ಧನ ಚಿಂತನೆಗಳು ಎಷ್ಟು ಪ್ರಭಾವ ಬೀರಿದ್ದವು ಎಂಬುದನ್ನು ಆತನ ದಮ್ಮದಿಂದ ನಾವು ಅರ್ಥ ಮಾಡಿಕೊಳ್ಳಬಹುದು. ಅಂಬೇಡ್ಕರ್ ಸಹ ಮಹಾ ಮಾನವತಾವಾದಿಯಾಗಲು ಬುದ್ಧನಲ್ಲಿ ಕಂಡ ಜ್ಞಾನದ ಬೆಳಕು ಎಂಬುದನ್ನು ಮರೆತು ಇಂದು ಬುದ್ಧನನ್ನು ಕೇವಲ ಧರ್ಮಕ್ಕೆ ಮಾತ್ರ ಸೀಮಿತಗೊಳಿಸಿ ನೋಡುತ್ತಿದ್ದೇವೆ. ಪ್ರತಿಯೊಬ್ಬರೂ ಜ್ಞಾನದ ಆಸ್ತಿಯನ್ನಾಗಿ ಬುದ್ಧನನ್ನು ಯಾಕೆ ನೋಡಬಾರದು ಎಂಬುದನ್ನು ಅರ್ಥ ಮಾಡಿಕೊಳ್ಳಬೇಕಾದ ಅನಿವಾರ್ಯತೆ ಇದೆ ಎಂದು ಹೇಳಿದರು.

ಬುದ್ಧನ ಪ್ರೀತಿ, ಕರುಣೆ, ಮೈತ್ರೇಯಿ ಗುಣಗಳು ಜಗತ್ತಿಗೆ ಎಷ್ಟು ಅನಿವಾರ್ಯ ಎಂಬುದು ತಿಳಿಯದಿರುವ ಕಾರಣಕ್ಕೆ ಇಂದು ಎಲ್ಲಿ ನೋಡಿದರೂ ಸಂಘರ್ಷಗಳು ತಾಂಡವಾಡುತ್ತಿವೆ. ಬುದ್ಧ ಹೇಳಿದ ಪ್ರೀತಿ ಎಂದರೆ ಎಲ್ಲರನ್ನೂ ಪ್ರೀತಿಸುವುದಲ್ಲ, ನಿನ್ನನ್ನು ನೀನು ಮೊದಲು ಪ್ರೀತಿಸು. ಹೆಂಗೆ ಎಂದರೆ ನಮಗೆ ಬೇಕಾದ ಜ್ಞಾನ, ಆರೋಗ್ಯ, ಶುಚಿತ್ವವನ್ನು ಕಾಪಾಡಿಕೊಳ್ಳುವುದು ಎಂದರ್ಥ. ಕರುಣೆ ಎಂದರೆ ಬೇರೆಯವರ ಬಗ್ಗೆ ಕರುಣೆ ತೋರಿಸುವ ಮುನ್ನ ನಿನ್ನ ಮೇಲೆ ನಿನಗೆ ಕರುಣೆ ಇರಲಿ. ಅಂದರೆ ನಿನ್ನ ಮಾನಸಿಕ ಮತ್ತು ದೈಹಿಕ ಸುರಕ್ಷತೆ ಬಗ್ಗೆ ನೀನೇ ಯೋಚಿಸಿಕೊಳ್ಳಬೇಕು ಎಂದು ಹೇಳಿದರು.

ತಾಲೂಕು ಪಶು ಮತ್ತು ವೈದ್ಯಕೀಯ ಇಲಾಖೆಯ ಸಹಾಯಕ ನಿರ್ದೇಶಕರಾದ ಮಂಜುನಾಥ್, ತಾಲೂಕು ಕೃಷಿ ಇಲಾಖೆಯ ಸಹಾಯಕ ನಿರ್ದೇಶಕರಾದ ರೇಣುಕಾ ಪ್ರಸನ್ನ, ಡಾ.ಎಂ.ಮುನಿರಾಜು, ವಕೀಲರಾದ ಹರೀಂದ್ರ, ದಲಿತಪರ ಸಂಘಟನೆಗಳ ಒಕ್ಕೂಟದ ಅಧ್ಯಕ್ಷ ಚಿನ್ನಸ್ವಾಮಿ, ಗ್ರಾಪಂ ಮಾಜಿ ಸದಸ್ಯ ಮುನಿರಾಜು, ಶಿಕ್ಷಕ ಅಣ್ಣಯ್ಯ, ಹೋರಾಟಗಾರ ನಾರಾಯಣಸ್ವಾಮಿ, ವಿವಿಧ ದಲಿತ ಸಂಘಟನೆಗಳ ಮುಖಂಡರು ಉಪಸ್ಥಿತರಿದ್ದರು.



ಬುದ್ಧನ ತತ್ವಾದರ್ಶ ಅಳವಡಿಸಿಕೊಳ್ಳಿ

ಚನ್ನಪಟ್ಟಣ: ಬುದ್ಧನ ತತ್ವಾದರ್ಶಗಳನ್ನು ಪ್ರತಿಯೊಬ್ಬರು ಮೈಗೂಡಿಸಿಕೊಂಡು ಸನ್ಮಾರ್ಗದಲ್ಲಿ ನಡೆಯಬೇಕು ಎಂದು ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಜಿಲ್ಲಾ ಉಪಾಧ್ಯಕ್ಷ ಅಕ್ಕೂರು ಶೇಖರ್‌ತಿಳಿಸಿದರು.

ನಗರದ ತಾಲೂಕು ಕಚೇರಿ ಸಭಾಂಗಣದಲ್ಲಿ ತಾಲೂಕು ಆಡಳಿತ ಹಾಗೂ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಆಯೋಜಿಸಿದ್ದ ಬುದ್ಧಪೂರ್ಣಿಮೆ ಕಾರ್ಯಕ್ರಮದಲ್ಲಿ ಬುದ್ಧನ ಪ್ರತಿಮೆಗೆ ಪುಷ್ಪಾರ್ಚನೆ ಮಾಡಿ ಮಾತನಾಡಿದರು.

ಭಗವಾನ್ ಬುದ್ಧ ಆಡಂಬರದ ಜೀವನವನ್ನು ಬಿಟ್ಟು ಸಮಾಜದಲ್ಲಿ ಬೇರೂರಿದ್ದ ಮೇಲುಕೀಳು ಎಂಬ ಬೇಧ, ಅನ್ಯಾಯ, ಅಧರ್ಮ, ಮೋಸ, ವಂಚನೆ ಹೋಗಲಾಡಿಸಲು ಶ್ರಮಿಸಿದರು. ಪ್ರಪಂಚಕ್ಕೆ ಅಹಿಂಸ ತತ್ವವನ್ನು ಸಾರಿದರು ಎಂದರು.

ಉಪತಹಸಿಲ್ದಾರ್‌ಮಲ್ಲೇಶ್‌ಮಾತನಾಡಿ, ಭಗವಾನ್ ಬುದ್ಧನ ಜೀವನ, ವಿಚಾರಧಾರೆಗಳ ಕುರಿತು ಬೆಳಕು ಚೆಲ್ಲಿದರು. ತಾಪಂ ಇಒ ಸಂದೀಪ್, ಬಿಇಒ ರಾಮಲಿಂಗಯ್ಯ, ಅಕ್ಷರದಾಸೋಹ ಸಹಾಯಕ ನಿರ್ದೇಶಕ ಸಿದ್ದರಾಜು, ನಗರಸಭೆ ವ್ಯವ ಸ್ಥಾಪಕರಾದ ಲತಾ, ಉಪ ತಹಸೀಲ್ದಾರ್ ಹರೀಶ್, ಕಂದಾಯ ನಿರೀಕ್ಷಕ ವೀರೇಶ್, ಪಶುವೈದ್ಯ ಆಸ್ಪತ್ರೆಯ ಡಾ. ಕೃಷ್ಣಮೂರ್ತಿ, ಜಿಲ್ಲಾ ಎಸ್.ಸಿ.ಎಸ್.ಟಿ ಜಿಲ್ಲಾಧ್ಯಕ್ಷ ಜೈಪ್ರ ಕಾಶ್, ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಉಸ್ತುವಾರಿ ಶಶಾಂಕ್, ವೆಂಕಟೇಶ್, ಅಪ್ಪಗೆರೆ ಶ್ರೀನಿವಾಸ್ ಇತರರಿದ್ದರು.

ಮಾನವ ಧರ್ಮದ ನೆಲೆಗಟ್ಟಿನ ಮೇಲೆ ಬದುಕಬೇಕು: ಶಿವಸಿದ್ದೇಶ್ವರ ಸ್ವಾಮೀಜಿ

ಶಿವಕುಮಾರ ಸ್ವಾಮೀಜಿ ಶಿಲಾವಿಗ್ರಹ ಅನಾವರಣ



ತೊರೆಕೆಂಪೋಹಳ್ಳಿಯಲ್ಲಿ ಬಸವೇಶ್ವರ ಸ್ವಾಮಿ ಹಾಗೂ ಈಶ್ವರ ದೇವಾಲಯ ಉದ್ಘಾಟನೆ, ವಿಮಾನ ಗೋಪುರ ಲೋಕಾರ್ಪಣಾ ಕಾರ್ಯಕ್ರಮದಲ್ಲಿ ಸಿದ್ದಗಂಗಾ ಮಠದ ಕಿರಿಯ ಶ್ರೀ ಶಿವಸಿದ್ದೇಶ್ವರ ಸ್ವಾಮೀಜಿ ಮಾತನಾಡಿದರು.

ದಾಬಸ್‌ಪೇಟೆ: ಆಧುನಿಕತೆ ಅಬ್ಬರದ ಮಧ್ಯೆಯೂ ಗ್ರಾಮೀಣ ಭಾಗದಲ್ಲಿ ನಡೆಯುವ ಜಾತ್ರೆ, ಗುಡಿ ಗೋಪುರಗಳ ನಿರ್ಮಾಣ, ಧಾರ್ಮಿಕ ಚಟುವಟಿಕೆಗಳು ಸಂಸ್ಕೃತಿ ಉಳಿಸುವಲ್ಲಿ ಸಹಕಾರಿ ಎಂದು ಸಿದ್ದಗಂಗಾ ಮಠದ ಶಿವಸಿದ್ದೇಶ್ವರ ಸ್ವಾಮೀಜಿ ತಿಳಿಸಿದರು.

ತೊರೆಕೆಂಪೋಹಳ್ಳಿಯಲ್ಲಿ ಬಸವೇಶ್ವರಸ್ವಾಮಿ ಹಾಗೂ ಈಶ್ವರ ದೇವಾಲಯ ಉದ್ಘಾಟನೆ, ವಿಮಾನ ಗೋಪುರ ಲೋಕಾರ್ಪಣೆ, ಬಸವೇಶ್ವರ, ಈಶ್ವರ, ಗಣಪತಿ, ಸುಬ್ರಹ್ಮಣ್ಯ ದೇವರ ಪ್ರತಿಷ್ಠಾಪನೆ ಹಾಗೂ ಬಸವೇಶ್ವರರು ಹಾಗೂ ಶಿವಕುಮಾರ ಸ್ವಾಮೀಜಿಯವರ ಶಿಲಾವಿಗ್ರಹ ಅನಾವರಣದ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ವಿವಿಧ ಧರ್ಮಗಳು ನಾಡಿನಲ್ಲಿದ್ದರೂ ಕೊನೆಗೆ ಐಕ್ಯ ಸ್ಥಾನ ಮಾತ್ರ ಒಂದೇ ಆಗಿದೆ. ನೊಂದ ಜೀವಗಳನ್ನು ಹಸನು ಮಾಡುವ ಶಕ್ತಿಯುಳ್ಳ ನಮ್ಮ ಸಂಸ್ಕೃತಿ ಅರ್ಥೈಸಿಕೊಳ್ಳಲು ವಿದೇಶಿಗರು ಒಲವು ತೋರುತ್ತಿರುವುದು ಹೆಮ್ಮೆಯ ಸಂಗತಿ. ಧರ್ಮದ ಜಾಗೃತಿ, ಮೌಲ್ಯ ಉಳಿಸಿಕೊಂಡು, ಬದುಕಿಗೆ ಅರ್ಥ ತಂದುಕೊಡುವಲ್ಲಿ ಪ್ರತಿಯೊಬ್ಬರೂ ಗಮನಹರಿಸಬೇಕಿದೆ ಎಂದು ಸಲಹೆ ನೀಡಿದರು.

ಸಮಾರಂಭದಲ್ಲಿ ಗದ್ದುಗೆ ಮಠದ ಶ್ರೀ ಮಹಂತ ಸ್ವಾಮೀಜಿ, ಬಸವಣ್ಣ ದೇವರ ಮಠದ ಸಿದ್ದಲಿಂಗಸ್ವಾಮೀಜಿ, ಹೊನ್ನಮ್ಮಗವಿ ಮಠದ ರುದ್ರಮುನಿ ಶಿವಾಚಾರ್ಯ ಸ್ವಾಮೀಜಿ, ಹೊನ್ನಮ್ಮಗವಿ ಮಠದ ರುದ್ರಮುನಿ ಶಿವಾಚಾರ್ಯ ಸ್ವಾಮೀಜಿ, ಜಗ್ಗಯ್ಯನಮಠದ ಚನ್ನಬಸವ ಸ್ವಾಮೀಜಿ, ಕಂಬಾಳು ಮಠದ ಚನ್ನವೀರ ಶಿವಾಚಾರ್ಯ ಸ್ವಾಮೀಜಿ, ಬಂಡೆಮಠದ ಮಹಾಲಿಂಗ ಸ್ವಾಮೀಜಿ, ಶಾಸಕ ಶ್ರೀನಿವಾಸ್, ಎನ್‌ಪಿಎ ಅಧ್ಯಕ್ಷ ನಾಗರಾಜು, ಟಿಎಪಿಎಂಎಸ್ ಅಧ್ಯಕ್ಷ ಹನುಮಂತರಾಜು, ಬಿಜೆಪಿ ತಾಲೂಕು ಮಾಜಿ ಅಧ್ಯಕ್ಷ ಲೋಕೇಶ್, ತಾಪಂ ಮಾಜಿ ಸದಸ್ಯ ಮುನಿರಾಜು, ಎಂಬಿಟಿ ರಾಮಕೃಷ್ಣಪ್ಪ ಇದ್ದರು.

ಅಪರ ಜಿಲ್ಲಾಧಿಕಾರಿ ಚಂದ್ರಯ್ಯ | ಹಸ್ತ ಪ್ರತಿಗಳು ಮತ್ತು ದಾಖಲೆಗಳ ಇಂದಿನ ತಂತ್ರಜ್ಞಾನದಡಿ ಶಾಶ್ವತವಾಗಿ ಉಳಿಸುವ ಯೋಜನೆ

ಹಸ್ತ ಪ್ರತಿಗಳ ಸಂರಕ್ಷಣೆ, ಡಿಜಿಟಲೀಕರಣಕ್ಕೆ ಸಹಕರಿಸಲು ಸೂಚನೆ

ರಾಮನಗರ : ಕೇಂದ್ರ ಸರ್ಕಾರದ ಜ್ಞಾನ ಭಾರತಂ ಮಿಷನ್ ಯೋಜನೆಯಡಿ ಇಡೀ ದೇಶದಲ್ಲಿರುವ ಹಸ್ತಪ್ರತಿಗಳ ಮಾಹಿತಿಯನ್ನು ಕೇಂದ್ರ ಸರ್ಕಾರವು ಅಭಿವೃದ್ಧಿಪಡಿಸಿರುವ ಮೊಬೈಲ್ ಅಪ್ಲಿಕೇಷನ್‌ನಲ್ಲಿ ಅಪ್ಲೋಡ್ ಮಾಡುವ ಮೂಲಕ ಸಂಗ್ರಹಣೆಗೊಳ್ಳುವ ರಾಷ್ಟ್ರೀಯ ಭಂಡಾರವು (National Repository) ದತ್ತಾಂಶದ ಮಾಹಿತಿಯನ್ನು ವಿಶ್ವಕ್ಕೆ ಹಂಚಿಕೊಳ್ಳುವ ಉದ್ದೇಶದಿಂದ ಈ ಯೋಜನೆಯನ್ನು ಜಾರಿಗೊಳಿಸಲಾಗಿದೆ ಎಂದು ಅಪರ ಜಿಲ್ಲಾಧಿಕಾರಿ ಆರ್. ಚಂದ್ರಯ್ಯ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜ್ಞಾನ ಭಾರತಂ ಮಿಷನ್ ಯೋಜನೆಯಡಿ ಹಸ್ತ ಪ್ರತಿಗಳ ಸಂರಕ್ಷಣೆ ಮತ್ತು ಡಿಜಿಟಲೀಕರಣ ಕಾರ್ಯ ಯೋಜನೆ ಕುರಿತು ನಡೆದ ಸಭೆಯಲ್ಲಿ ಮಾತನಾಡಿದ ಅವರು, ಕೇಂದ್ರ ಸರ್ಕಾರದ ಜ್ಞಾನ ಭಾರತಂ ಮಿಷನ್ ಯೋಜನೆಯಡಿ ರಾಷ್ಟ್ರಾದ್ಯಂತ ಶತಮಾನಗಳಷ್ಟು ಹಳೆಯ ಕೈಬರಹ ಪತ್ರಗಳು, ಹಸ್ತ ಪ್ರತಿಗಳು ಮತ್ತು ದಾಖಲೆಗಳ ಇಂದಿನ ತಂತ್ರಜ್ಞಾನ ಮೂಲಕ ಶಾಶ್ವತವಾಗಿ ಉಳಿಸಲು ಇವುಗಳ ಸಮೀಕ್ಷೆ, ಸಂರಕ್ಷಣೆ, ಡಿಜಿಟಲೀಕರಣ, ನೋಂದಣಿ, ವಿಮರ್ಶಾತ್ಮಕ ಸಂಪಾದನೆ, ಅನುವಾದ ಮತ್ತು ಪ್ರಕಟಣೆ ಮೂಲಕ ಕರ್ನಾಟಕದ ಶ್ರೀಮಂತ ಸಾಂಸ್ಕೃತಿಕ ಪರಂಪರೆಯನ್ನು ಒಂದೇ ರಾಷ್ಟ್ರೀಯ ವೇದಿಕೆಯ ಸಾರ್ವಜನಿಕ ಪ್ರವೇಶವನ್ನು ಒದಗಿಸಿ ಭವಿಷ್ಯದ ಪೀಳಿಗೆಗಾಗಿ ಹಸ್ತಪ್ರತಿಗಳ ಸಂರಕ್ಷಣೆ ಹಾಗೂ ಡಿಜಿಟಲೀಕರಣ ಯೋಜನೆ ಹಮ್ಮಿಕೊಂಡಿದೆ ಎಂದರು.

ಆರ್ಟ್ ಆಫ್ ಲಿವಿಂಗ್ ಸಂಸ್ಥೆ ಪ್ರತಿನಿಧಿ ಪ್ರೇಮಪುರಿ ಶಿವಂ ಮಾತನಾಡಿ, ನಮ್ಮ ಬಳಿ ಕೆಲವು ಹಸ್ತ ಪ್ರತಿಗಳು ಇರಬಹುದು ಇದರ ಬಗ್ಗೆ ಕೂಡಲೇ ಪರಿಶೀಲಿಸಿ ಮಾಹಿತಿಯನ್ನು ಪ್ರವಾಸೋದ್ಯಮ ಇಲಾಖೆಗೆ ತಿಳಿಸಲಾಗುವುದು ಎಂದು ಮಾಹಿತಿ ನೀಡಿದರು.

ಚುಂಚನಗಿರಿ ಮಠ ರಾಮನಗರ ಶಾಖೆ ಆಡಳಿತಾಧಿಕಾರಿಗಳು ಹಾಗೂ ಕನಕಪುರ ದೇಗುಲ ಮಠದವರ ತಮ್ಮ ಬಳಿ ಯಾವುದೇ ರೀತಿಯ ಹಸ್ತ ಪ್ರತಿಗಳು ಇಲ್ಲ ಎಂದು ಸಭೆಗೆ ಮಾಹಿತಿ ನೀಡಿದರು.

ಚುಂಚನಗಿರಿ ಮಠದವರು ಹಸ್ತ ಪ್ರತಿಗಳನ್ನು ಮಂಡ್ಯ ಜಿಲ್ಲೆಯ ಆದಿಚುಂಚನಗಿರಿ ಮಠದಲ್ಲಿ ಸಂಗ್ರಹಿಸಲಾಗಿದೆ ಎಂದು ತಿಳಿಸಿದಾಗ ಅಪರ ಜಿಲ್ಲಾಧಿಕಾರಿಗಳು ಯಾವುದಾದರೂ ಹಸ್ತ ಪ್ರತಿಗಳು ಲಭ್ಯವಾದಲ್ಲಿ ಪ್ರವಾಸೋದ್ಯಮ ಇಲಾಖೆಗೆ ಮಾಹಿತಿ ನೀಡುವಂತೆ ಸೂಚಿಸಿದರು.

ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕ ರವಿಕುಮಾರ್‌ಮಾತನಾಡಿ, ಜಿಲ್ಲೆಯಲ್ಲಿ ಮರಳೆಗವಿ ಮಠ, ದೇಗುಲ ಮಠ, ಅಬ್ಬೂರು ಮಠ, ವಾದಿರಾಜರ ಮಠ, ಅಪ್ರಮೇಯ ದೇವಾಲಯ, ಹಳೆ ಬ್ರಾಹ್ಮಣರ ಮನೆಗಳು, ಹಳೇ ದೇವಾಲಯಗಳಲ್ಲಿ ಹಸ್ತ ಪ್ರತಿಗಳು ಲಭ್ಯವಿರುವ ಬಗ್ಗೆ ಪರಿಶೀಲಿಸಬೇಕು ಎಂದು ತಿಳಿಸಿದರು.

ಜಾನಪದ ಲೋಕದ ಕ್ಯೂರೇಟರ್‌ರವಿ ಮಾತನಾಡಿ, ಜಾನಪದ ಲೋಕದಲ್ಲಿ 150 ಹೆಚ್ಚು ತಾಳೆಗರಿ ಹಸ್ತಪ್ರತಿಗಳು, 5 ಕಡತಗಳು, ಜಾನಪದ ಲೋಕದ ನಿರ್ಮಾತೃ ನಿವೃತ್ತ ಐ.ಎ.ಎಸ್ ಅಧಿಕಾರಿ ನಾಗೇಗೌಡ ಎಚ್.ಎನ್ ಅವರ ಕೈಬರಹದ 12 ದಿನಚರಿ ಡೈರಿಗಳು, ಭೂಮಿಗೆ ಬಂದ ಗಂಧರ್ವ, ಸೋಬಾನೆ ಚಿಕ್ಕಮ್ಮನ ಪದಗಳು, ಪ್ರವಾಸಿ ಕಂಡ ಇಂಡಿಯಾ, ದೊಡ್ಡಮನೆ ಪುಸ್ತಕಗಳು ಲಭ್ಯವಿದೆ ಎಂದು ಹೇಳಿದರು.



ರಾಮನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜ್ಞಾನ ಭಾರತಂ ಮಿಷನ್ ಯೋಜನೆಯಡಿ ಹಸ್ತ ಪ್ರತಿಗಳ ಸಂರಕ್ಷಣೆ ಮತ್ತು ಡಿಜಿಟಲೀಕರಣ ಕಾರ್ಯ ಯೋಜನೆ ಕುರಿತು ಅಪರ ಜಿಲ್ಲಾಧಿಕಾರಿ ಚಂದ್ರಯ್ಯರವರ ಅಧ್ಯಕ್ಷತೆಯಲ್ಲಿ ಸಭೆ ನಡೆಯಿತು.

ದೇಶದಲ್ಲಿ 20 ಹೊಸ ಇಎಸ್‌ಐಸಿ ಮೆಡಿಕಲ್ ಕಾಲೇಜು ಸ್ಥಾಪನೆ

ಕೇಂದ್ರ ಸಚಿವ ಡಾ. ಮನ್ಸುಖ್ ಮಾಂಡವೀಯ ಭರವಸೆ | ಕಾರ್ಮಿಕರ ಮಕ್ಕಳಿಗೆ 702 ವೈದ್ಯಕೀಯ ಸೀಟು ಮೀಸಲು: ಶೋಭಾ ಕರಂದ್ಲಾಜೆ

• **ಕನ್ನಡಪ್ರಭ ವಾರ್ತೆ** ದೊಡ್ಡಬಳ್ಳಾಪುರ

ಶ್ರಮಿಕವರ್ಗದವರುಹಾಗೂಅವರಅವಲಂಬಿತರಿಗೆ ಉಚಿತ ವೈದ್ಯಕೀಯ ಸೇವೆಗಳನ್ನು ಒದಗಿಸುವಲ್ಲಿ ಇಎಸ್‌ಐಸಿ ಆಸ್ಪತ್ರೆ ವರದಾನವಾಗಲಿದೆ. ಎಲ್ಲಾ ಕಾರ್ಮಿಕರು ವೈದ್ಯಕೀಯ ಸೇವೆಯ ಸದುಪಯೋಗ ಪಡೆಯಬೇಕು ಎಂದು ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಹಾಗೂ ಯುವಜನ ವ್ಯವಹಾರಗಳು ಮತ್ತು ಕ್ರೀಡಾ ಸಚಿವ ಡಾ. ಮನ್ಸುಖ್ ಮಾಂಡವೀಯ ಹೇಳಿದರು.

ನಗರದ ಬಾಶೆಟ್ಟಿಹಳ್ಳಿ ಕೈಗಾರಿಕಾ ಪ್ರದೇಶದಲ್ಲಿ ನೂತನವಾಗಿ ನಿರ್ಮಿಸಿರುವ 100 ಹಾಸಿಗೆ ಸಾಮರ್ಥ್ಯದಇಎಸ್‌ಐ-ಸಿಆಸ್ಪತ್ರೆಉದ್ಘಾಟಿಸಿಮಾತನಾಡಿದ ಅವರು, ಕಾರ್ಮಿಕರ ಕಲ್ಯಾಣ ಮತ್ತು ಸಾಮಾಜಿಕ ಭದ್ರತೆಯೇ ಕೇಂದ್ರ ಸರ್ಕಾರದ ಮೂಲಮಂತ್ರವಾಗಿದ್ದು, ದೊಡ್ಡಬಳ್ಳಾಪುರದಲ್ಲಿ ಸುಮಾರು ₹101 ಕೋಟಿ ವೆಚ್ಚದಲ್ಲಿ ಇಎಸ್‌ಐಸಿ ಆಸ್ಪತ್ರೆ ಕಟ್ಟಡ ನಿರ್ಮಿಸಲಾಗಿದೆ. ಜತೆಗೆ ಬಳ್ಳಾರಿಯಲ್ಲಿ ಸುಮಾರು 1.5 ಲಕ್ಷ ಜವಳಿ ಕಾರ್ಮಿಕರ ಅನುಕೂಲಕ್ಕಾಗಿ ₹150 ಕೋಟಿವೆಚ್ಚದಲ್ಲಿಸುಸಜ್ಜಿತಇಎಸ್‌ಐಸಿಆಸ್ಪತ್ರೆಯನ್ನು ನಿರ್ಮಿಸಲಾಗುತ್ತಿದೆ ಎಂದರು.

ಕೇಂದ್ರ ಸರ್ಕಾರ ಇಎಸ್‌ಐಸಿ ಆಸ್ಪತ್ರೆ ಮೂಲಕ ಕಾರ್ಮಿಕರಿಗೆ ಆರ್ಥಿಕ ಹೊರೆ ತಗ್ಗಿಸಿ ಗುಣಮಟ್ಟದ ಉಚಿತಆರೋಗ್ಯಸೇವೆಹಾಗೂಹೊಸಕಾರ್ಮಿಕಸಂಹಿತೆಯಡಿಲಿಂಗತಾರತಮ್ಯವಿಲ್ಲದೇಸಮಾನಕೆಲಸಕ್ಕೆ ಸಮಾನ ವೇತನ ನೀಡುತ್ತಿದ್ದೇವೆ ಎಂದು ತಿಳಿಸಿದರು.

20 ಇಎಸ್‌ಐಸಿ ಮೆಡಿಕಲ್ ಕಾಲೇಜು ಸ್ಥಾಪನೆ: ದೇಶಾದ್ಯಂತ 20 ಇಎಸ್‌ಐಸಿ ವೈದ್ಯಕೀಯ ಕಾಲೇಜುಗಳನ್ನು ಸ್ಥಾಪಿಸುವ ಮೂಲಕ ಕಾರ್ಮಿಕರ ಕುಟುಂಬಗಳಿಗೆಗುಣಮಟ್ಟದಶಿಕ್ಷಣಮತ್ತುಚಿಕಿತ್ಸೆಯ ಭರವಸೆನೀಡಲಾಗಿದೆ.ವೈದ್ಯಕೀಯಕಾಲೇಜುಗಳಲ್ಲಿ ಕಾರ್ಮಿಕರ ಮಕ್ಕಳಿಗಾಗಿ ಮೀಸಲಾತಿಯನ್ನು ಕಲ್ಪಿಸಲಾಗಿದೆ ಎಂದು ತಿಳಿಸಿದರು.

ಜಾರಿಗೆ ತರಲಾಗಿರುವ ನಾಲ್ಕು ಹೊಸ ಕಾರ್ಮಿಕ ಸಂಹಿತೆಗಳು ಖಾಸಗಿ ವಲಯದ ಉದ್ಯೋಗಿಗಳಿಗೆ ಸಾಮಾಜಿಕಭದ್ರತೆಮತ್ತುನೇಮಕಾತಿಪತ್ರದಖಾತರಿ ಒದಗಿಸುತ್ತವೆ.ಕಾರ್ಮಿಕರಆರೋಗ್ಯದದೃಷ್ಟಿಯಿಂದ 40 ವರ್ಷ ದಾಟಿದ ಪ್ರತಿಯೊಬ್ಬ ಕಾರ್ಮಿಕನಿಗೂ ವಾರ್ಷಿಕಉಚಿತಆರೋಗ್ಯತಪಾಸಣೆಕಡ್ಡಾಯಗೊಳಿಸಲಾಗಿದೆ.ಇದರಉದ್ದೇಶರೋಗಗಳನ್ನುಪ್ರಾಥಮಿಕ ಹಂತದಲ್ಲೇ ಪತ್ತೆ ಹಚ್ಚಿ ಕಾರ್ಮಿಕರ ಜೀವ ರಕ್ಷಣೆಗೆ ಒತ್ತು ನೀಡಲಾಗಿದೆ ಎಂದು ಹೇಳಿದರು.

ಕಾರ್ಮಿಕರ ಮಕ್ಕಳಿಗೆ 702 ವೈದ್ಯಕೀಯ ಸೀಟು ಮೀಸಲು: ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಮಾತನಾಡಿ, ಇಂದು ₹101 ಕೋಟಿ ವೆಚ್ಚದಲ್ಲಿ ಅತ್ಯಾಧುನಿಕ ಇಎಸ್‌ಐಸಿ ಆಸ್ಪತ್ರೆ ನಿರ್ಮಿಸಲಾಗಿದ್ದು, ಇನ್ನು ಮುಂದೆ ದೊಡ್ಡಬಳ್ಳಾಪುರ ಭಾಗದ ಕಾರ್ಮಿಕರಿಗೆ ಇಲ್ಲಿಯೇ ಗುಣಮಟ್ಟದ ವೈದ್ಯಕೀಯ ಚಿಕಿತ್ಸೆ ದೊರೆಯಲಿದೆ. ಪ್ರಸ್ತುತ ಆಸ್ಪತ್ರೆಗೆ 9 ತಜ್ಞ ವೈದ್ಯರು, ನರ್ಸಿಂಗ್ ಸಿಬ್ಬಂದಿ ಹಾಗೂ ತಾಂತ್ರಿಕ ಸಿಬ್ಬಂದಿಯನ್ನು ನೇಮಕ ಮಾಡಲಾಗಿದೆ. ಸದ್ಯಕ್ಕೆ ಇದು ರಾಜಾಜಿನಗರ ಆಸ್ಪತ್ರೆಯ ಮೇಲ್ವಿಚಾರಣೆಯಲ್ಲಿದ್ದು, ಮುಂದಿನ ದಿನಗಳಲ್ಲಿ ಸ್ವತಂತ್ರವಾಗಿ ಕಾರ್ಯನಿರ್ವಹಿಸಲಿದೆ ಎಂದರು.

ದೇಶಾದ್ಯಂತ ಇರುವ 15 ಕೋಟಿ ಕಾರ್ಮಿಕರು ಮತ್ತು ಅವರ ಕುಟುಂಬದವರಿಗೆ ಗುಣಮಟ್ಟದ ಆರೋಗ್ಯ ಸೌಲಭ್ಯಗಳನ್ನು ಒದಗಿಸಲು ನಮ್ಮ ಸರ್ಕಾರ ಬದ್ಧವಾಗಿದೆ. ದೇಶದ ಇಎಸ್‌ಐಸಿ ವೈದ್ಯಕೀಯ ಕಾಲೇಜುಗಳಲ್ಲಿ ಪ್ರಸ್ತುತ 1,550 ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದು, ಅದರಲ್ಲಿ ವಿಶೇಷವಾಗಿ ಕಾರ್ಮಿಕರ ಮಕ್ಕಳಿಗಾಗಿ 702 ಸೀಟುಗಳನ್ನು ಮೀಸಲಿಡಲಾಗಿದೆ.ಮುಂಬರುವವರ್ಷದಲ್ಲಿಕೇಂದ್ರ ಸರ್ಕಾರದಿಂದ ನಿರ್ವಹಿಸಲ್ಪಡುವ ಇಂತಹ ಆಸ್ಪತ್ರೆಗಳ ಸಂಖ್ಯೆ ಹೆಚ್ಚಾಗಲಿದೆ ಎಂದು ತಿಳಿಸಿದರು.

5 ಜಿಲ್ಲೆಗಳಿಗೆ ಅನುಕೂಲ: ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತದ ಸಂಸದ ಡಾ. ಕೆ.ಸುಧಾಕರ್ ಮಾತನಾಡಿ, ಇಎಸ್‌ಐಸಿ ಆಸ್ಪತ್ರೆ ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆ. ಸಂಘಟಿತ ಹಾಗೂ ಅಸಂಘಟಿತ ಕಾರ್ಮಿಕರಿಗೆ ಉಚಿತ ಆರೋಗ್ಯ ಸೇವೆ ಒದಗಿಸುತ್ತಿದೆ. ದೊಡ್ಡ ಬಳ್ಳಾಪುರದ ಇಎಸ್‌ಐಸಿ ಆಸ್ಪತ್ರೆಯಲ್ಲಿ ಕಾರ್ಮಿಕರಿಗೆ ಗುಣಮಟ್ಟದ ಚಿಕಿತ್ಸೆ ಒದಗಿಸಲಿದೆ. ಈ ಭಾಗದಲ್ಲಿ 5 ಲಕ್ಷ ಕಾರ್ಮಿಕರಿದ್ದು, ಬೆಂಗಳೂರು ಗ್ರಾಮಾಂತರ, ಕೋಲಾರ, ಚಿಕ್ಕಬಳ್ಳಾಪುರ, ಬೆಂಗಳೂರು ಜಿಲ್ಲೆಯ ಕಾರ್ಮಿಕರು ವೈದ್ಯಕೀಯ ಸೇವೆ ಪಡೆಯಲು ಸಹಕಾರಿಯಾಗಲಿದೆ ಎಂದರು.

ಬಹುದಿನದ ಬೇಡಿಕೆ ಈಡೇರಿಕೆ: ದೊಡ್ಡಬಳ್ಳಾಪುರ ಶಾಸಕ ಧೀರಜ್ ಮುನಿರಾಜು ಮಾತನಾಡಿ, ಜಿಲ್ಲೆಯಲ್ಲಿ ಕಾರ್ಮಿಕರ ಬಹುದಿನಗಳ ಕನಸು ಇಂದು ನನಸಾಗುತ್ತಿದೆ. ಇಲ್ಲಿ ನೂರಾರು ಕಾರ್ಖಾನೆಗಳು, ಕಂಪನಿಗಳು ಸ್ಥಾಪನೆಯಾಗಿದ್ದು, ಅವುಗಳಲ್ಲಿ ಕೆಲಸ ಮಾಡುವ ಲಕ್ಷಾಂತರ ಕಾರ್ಮಿಕರಿಗೆ ಇಎಸ್‌ಐಸಿ ಆಸ್ಪತ್ರೆ ಅನುಕೂಲವಾಗಲಿದೆ ಎಂದರು.

ಬಳ್ಳಾರಿ ಆಸ್ಪತ್ರೆಗೆ ಶಂಕು: ಇದೇ ವೇಳೆ ವರ್ಚುವಲ್ ಮೂಲಕ ಬಳ್ಳಾರಿಯಲ್ಲಿ ನಿರ್ಮಾಣಗೊಳ್ಳಲಿರುವ 100 ಹಾಸಿಗೆಗಳ ಇಎಸ್‌ಐಸಿ ಆಸ್ಪತ್ರೆಗೆ ಶಂಕುಸ್ಥಾಪನೆ ನೆರವೇರಿಸಲಾಯಿತು.

ಸೌಲಭ್ಯಗಳ ವಿತರಣೆ: ಕಾರ್ಯಕ್ರಮದಲ್ಲಿ ಇಎಸ್‌ಐಸಿ ಯೋಜನೆಯಡಿ ಅವಲಂಬಿತ ಭತ್ಯೆ, ಶಾಶ್ವತ ಅಂಗವೈಕಲ್ಯ ಭತ್ಯೆ, ಮಾತೃತ್ವಭತ್ಯೆಯಫಲಾನುಭವಿಗಳಿಗೆ ನಗದು ಸೌಲಭ್ಯದ ಚೆಕ್‌ಗಳನ್ನು ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ವೈದ್ಯಕೀಯ ಆಯುಕ್ತ ಡಾ.ಆರ್‌ಶ್ರೀನಿವಾಸ್, ಬಾಶೆಟ್ಟಿಹಳ್ಳಿ ಪಟ್ಟಣ ಪಂಚಾಯಿತಿ ಅಧ್ಯಕ್ಷ ಪ್ರೇಮ್ ಕುಮಾರ್, ಇಎಸ್‌ಐಸಿ ಆಸ್ಪತ್ರೆ ವೈದ್ಯರು, ಸಿಬ್ಬಂದಿ ಉಪಸ್ಥಿತರಿದ್ದರು.



ದೊಡ್ಡಬಳ್ಳಾಪುರ ಕೈಗಾರಿಕಾ ಪ್ರದೇಶದಲ್ಲಿ ನಿರ್ಮಿಸಲಾಗಿರುವ 100 ಹಾಸಿಗೆ ಸಾಮರ್ಥ್ಯದ ಇಎಸ್‌ಐಸಿ ಆಸ್ಪತ್ರೆಯನ್ನು ಕೇಂದ್ರ ಸಚಿವ ಮನ್ಸುಖ್ ಮಾಂಡವೀಯ ಉದ್ಘಾಟಿಸಿದರು.



ದೊಡ್ಡಬಳ್ಳಾಪುರದಲ್ಲಿ ಇಎಸ್‌ಐಸಿ ಆಸ್ಪತ್ರೆ ಉದ್ಘಾಟನಾ ಕಾರ್ಯಕ್ರಮದಲ್ಲಿ ಕೇಂದ್ರ ಪ್ರಾಯೋಜಿತ ಯೋಜನೆಗಳ ಫಲಾನುಭವಿಗಳಿಗೆ ಸವಲತ್ತುಗಳನ್ನು ವಿತರಿಸಲಾಯಿತು.

ಸುದ್ದಿ ಸಿಂಚನ

ಕಾರಲ್ಲಿ ಸುಟ್ಟು ಕರಕಲಾಗಿದ್ದ ಮಹಿಳೆ ಪ್ರಕರಣ: ವ್ಯಕ್ತಿ ಆತ್ಮಹತ್ಯೆ

ದೊಡ್ಡಬಳ್ಳಾಪುರ: ಕಾರೊಂದರಲ್ಲಿ ಸುಟ್ಟು ಕರಕಲಾಗಿದ್ದ ಮಹಿಳೆ ಪ್ರಕರಣಕ್ಕೆ ಸಂಬಂಧಿಸಿದಂತೆ ಪರಾರಿಯಾಗಿದ್ದ ಎನ್ನಲಾದ ವ್ಯಕ್ತಿ ರೈಲಿಗೆ ಸಿಲುಕಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಮೃತನನ್ನು ಮಾರಸಂದ್ರ ನಿವಾಸಿ ರಾಮಾಂಜಿನಪ್ಪ(46) ಎಂದು ಗುರುತಿಸಲಾಗಿದೆ. ಆತ ಬಿಡದಿ ಬಳಿ ರೈಲಿಗೆ ಸಿಲುಕಿ ಆತ್ಮಹತ್ಯೆ ಮಾಡಿಕೊಂಡಿದ್ದು, ಮೃತದೇಹದ ಬಳಿ ಆತನ ಗುರುತಿನ ಚೀಟಿ ದೊರೆತಿವೆ. ತಾಲೂಕಿನ ಜಿಂಕೆಬಚ್ಚಹಳ್ಳಿಯ ಸಮೀಪ ಶನಿವಾರ ಕಾರೊಂದು ಅನುಮಾನಾಸ್ಪದ ರೀತಿಯಲ್ಲಿ ಸುಟ್ಟು ಕರಕಲಾಗಿದ್ದು, ಅದರೊಳಗೆ ಮಹಿಳೆಯೊಬ್ಬರ ಅಸ್ಥಿಪಂಜರದ ಅವಶೇಷಗಳು ಪತ್ತೆಯಾಗಿದ್ದವು. ಈ ಕಾರು ಮಾರಸಂದ್ರದ ಸುರೇಶ್‌ಗೆ ಸೇರಿದ್ದು, ಆತನ ನೆರೆಮನೆಯ ರಾಮಾಂಜಿನಪ್ಪ ತಮ್ಮ ಕುಟುಂಬ ಸದಸ್ಯರೊಬ್ಬರು ಅನಾರೋಗ್ಯದಿಂದ ಬಳಲುತ್ತಿದ್ದು, ಆಸ್ಪತ್ರೆಗೆ ಕರೆದುಕೊಂಡು ಹೋಗುವ ಸಲುವಾಗಿ ಕಾರನ್ನು ತೆಗೆದುಕೊಂಡು ಹೋಗಿದ್ದ ಎನ್ನಲಾಗಿದೆ. ಕಾರಿನಲ್ಲಿ ದೊರೆತ ಅಸ್ಥಿಪಂಜರದ ಗುರುತು ಪತ್ತೆಯಾಗಿರಲಿಲ್ಲ. ಅಸ್ಥಿಪಂಜರದ ಕೊರಳ ಭಾಗದಲ್ಲಿ ಚಿನ್ನದ ಸರ ಪತ್ತೆಯಾದ ಹಿನ್ನಲೆ ಮಹಿಳೆ ಸುಟ್ಟುಭಸ್ಮವಾಗಿರುವುದು ದೃಢಪಟ್ಟಿತ್ತು. ಕಾರು ಬೆಂಕಿಗೆ ಆಹುತಿಯಾದ ಸ್ಥಳದ ಸಮೀಪ ಇರುವ ನೀಲಗಿರಿತೋಪಿನಲ್ಲಿ ಚಾಲಕನ ಮೊಬೈಲ್ ಫೋನ್ ಮತ್ತು ಸ್ವಲ್ಪ ದೂರದಲ್ಲಿ ಅಂಗಿ ಪತ್ತೆಯಾಗಿತ್ತು. ಇವುಗಳನ್ನು ಆಧರಿಸಿ ಪೊಲೀಸರು ತನಿಖೆ ಆರಂಭಿಸಿದ್ದರು. ಮಹಿಳೆ ಗುರುತು ಇನ್ನೂ ಪತ್ತೆಯಾಗಿಲ್ಲ.

ಗ್ರಾಮ ನೈರ್ಮಲ್ಯ ಜನ ಜಾಗೃತಿ ಮೂಡಿಸಿ

ಸೂಲಿಬೆಲೆ: ಸಾರ್ವಜನಿಕರು ತಮ್ಮ ಸುತ್ತಮುತ್ತಲಿನ ಪರಿಸರವನ್ನು ಶುದ್ಧವಾಗಿಟ್ಟುಕೊಳ್ಳುವ ಗ್ರಾಮದ ನೈರ್ಮಲ್ಯವನ್ನು ಕಾಪಾಡಬೇಕು ಎಂದು ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲೆ ಡಾ.ಕಲ್ಪನಾ ಹೇಳಿದರು. ಹೋಬಳಿಯ ಅತ್ತಿಬೆಲೆ ಗ್ರಾಮದಲ್ಲಿ ಸೂಲಿಬೆಲೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಹಾಗೂ ರಾಷ್ಟ್ರೀಯ ಸೇವಾ ಯೋಜನೆಯ ವಾರ್ಷಿಕ ಶ್ರಮದಾನ ಶಿಬಿರದ ಸಮಾರೋಪ ಸಮಾರಂಭ ಹಾಗೂ ಪರಿಸರ ಜಾಗೃತಿ ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ರಾಷ್ಟ್ರೀಯ ಸೇವಾ ಯೋಜನೆಯ ಶಿಬಿರದ ವಾರ್ಷಿಕ ಶ್ರಮದಾನ ಶಿಬಿರ 7 ದಿನಗಳ ಕಾಲ ಯಶಸ್ವಿಯಾಗಿ ನಡೆಸಲಾಗಿದ್ದು ವಿದ್ಯಾರ್ಥಿಗಳು ಸೇವಾ ಮನೋಭಾವದಿಂದ ಪಾಲ್ಗೊಂಡು ಗ್ರಾಮದ ಸ್ವಚ್ಛತೆ ಹಾಗೂ ಜಾಗೃತಿಯಲ್ಲಿ ತೊಡಗಿಸಿಕೊಂಡಿರುವುದು ಹರ್ಷದ ವಿಚಾರ. ಪ್ರತಿವರ್ಷ ಇದೇ ರೀತಿಯಲ್ಲಿ ವಿಶೇಷ ಶ್ರಮದಾನ ಶಿಬಿರಗಳನ್ನು ಹಮ್ಮಿಕೊಳ್ಳಲಾಗುವುದು ಎಂದರು. ಈ ವೇಳೆ ಉಪನ್ಯಾಸಕರಾದ ಡಾ.ಅಮೀರ್ ಪಾಷ, ಡಾ.ಚನ್ನಕೃಷ್ಣಪ್ಪ, ಶಿಬಿರಾಧಿಕಾರಿ ಕೃಷ್ಣಪ್ಪ, ಸಹಾಯಕ ಶಿಬಿರಾಧಿಕಾರಿ ವೆಂಕಟರಮಣಪ್ಪ, ಡಾ. ಅಶ್ವತ್ಥ್ ಮೊದಲಾದವರು ಉಪಸ್ಥಿತರಿದ್ದರು.

ಲಕ್ಷ್ಮೀನರಸಿಂಹಸ್ವಾಮಿ ಅದ್ದೂರಿ ಬ್ರಹ್ಮರಥೋತ್ಸವ



ಮಾಗಡಿ: ತಾಲೂಕಿನ ಐತಿಹಾಸಿಕ ಪುಣ್ಯಕ್ಷೇತ್ರವಾದ ಸಾವನದುರ್ಗ ಶ್ರೀ ಲಕ್ಷ್ಮೀನರಸಿಂಹಸ್ವಾಮಿ ಬ್ರಹ್ಮರಥೋತ್ಸವ ಅದ್ದೂರಿಯಾಗಿ ನೆರವೇರಿತು. ಬ್ರಹ್ಮರಥೋತ್ಸವದ ಅಂಗವಾಗಿ ಶ್ರೀ ಲಕ್ಷ್ಮೀನರಸಿಂಹ ಸ್ವಾಮಿಗೆ ವಿಶೇಷ ಪಂಚಾಮೃತ ಅಭಿಷೇಕ ಹೂವಿನ ಅಲಂಕಾರ ಬೆಳ್ಳಿ ಕವಚಧಾರಣೆ ಮಾಡಲಾಯಿತು. ಲಕ್ಷ್ಮೀದೇವಿ ಅಮ್ಮನವರ ಉತ್ಸವ ಮೂರ್ತಿಗಳನ್ನು ವಿಶೇಷವಾಗಿ ಅಲಂಕರಿಸಿ ರಥಬೀದಿಯ ವಿವಿಧೆಡೆ ಭಕ್ತರು ಏರ್ಪಡಿಸಿದ್ದ ಅರವಂಟಿಕೆಗಳಿಗೆ ಉತ್ಸವ ಮೂರ್ತಿಗಳನ್ನು ಕೊಂಡೊಯ್ದು ವಿಶೇಷ ಪೂಜೆ ಸಲ್ಲಿಸಲಾಯಿತು. ಬೆಂಗಳೂರು ದಕ್ಷಿಣ ಜಿಲ್ಲಾ ಹೆಚ್ಚುವರಿ ಜಿಲ್ಲಾಧಿಕಾರಿ ಚಂದ್ರಯ್ಯ ದಂಪತಿ ಹಾಗೂ ತಹಸೀಲ್ದಾರ್‌ಶರತ್ ಕುಮಾರ್ ರಥಕ್ಕೆ ವಿಧ್ಯುಕ್ತವಾಗಿ ಪೂಜೆ ಸಲ್ಲಿಸಿದರು. ಸಾಂಸ್ಕೃತಿಕ ಮೆರುಗು: ಜಾತ್ರೆಯ ಪ್ರಮುಖ ಆಕರ್ಷಣೆಯಾಗಿ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಕಲಾವಿದ ಅಂಕನಹಳ್ಳಿ ಶಿವಣ್ಣ ಮತ್ತು ತಂಡದವರಿಂದ ನಡೆದ ಪಟಕುಣಿತ ಭಕ್ತರ ಮನಸೂರೆಗೊಂಡಿತು. ಇದರೊಂದಿಗೆ ಕರಿಯಕಂಬಳಿ ಧರಿಸಿದ ಕಲಾವಿದರಿಂದ ಡೊಳ್ಳು ಕುಣಿತ, ಗಾರುಡಿ ಬೊಂಬೆಗಳು ಹಾಗೂ ಕರಡಿ ಕುಣಿತದ ಪ್ರದರ್ಶನ, ತಮಟೆ ಮತ್ತು ಮಂಗಳವಾದ್ಯಗಳ ಸಂಗೀತ ಸೇವೆ ರಥೋತ್ಸವಕ್ಕೆ ಕಳೆ ತಂದವು. ರಾಮನಗರ, ಮಂಡ್ಯ, ಮೈಸೂರು, ಬೆಂಗಳೂರು, ಆನೇಕಲ್, ಹೊಸೂರು, ಸೇರಿದಂತೆ ವಿವಿಧ ತಾಲ್ಲೂಕುಗಳಿಂದ ಸಾವಿರಾರು ಭಕ್ತರು ಆಗಮಿಸಿ ರಥಕ್ಕೆ ಬಾಳೆಹಣ್ಣು ದವನ ಎಸೆದು ಭಕ್ತಿ ಸಮರ್ಪಿಸಿದರು. ವಿವಿಧ ಸಮುದಾಯಗಳ ಅರವಟಿಕೆಗಳಲ್ಲಿ ಭಕ್ತರಿಗಾಗಿ ವ್ಯವಸ್ಥೆ ಮಾಡಲಾಗಿತ್ತು.

ಆಲೋಚನೆಗಳು ಚಲಿಸುತ್ತಿರಬೇಕು: ಕಿರಣ್‌ಕುಮಾರ್

ಕಾಯಕ ಯೋಗಿ ಪ್ರಶಸ್ತಿ ಪ್ರದಾನ, ಕಾರ್ಮಿಕ ದಿನಾಚರಣೆ, ಗಣ್ಯರಿಗೆ ಗೌರವ ಸಮ್ಮಾನ

• **ಕನ್ನಡಪ್ರಭ ವಾರ್ತೆ** ಸೂಲಿಬೆಲೆ

ಪ್ರತಿಯೊಬ್ಬಮನುಷ್ಯರಲ್ಲಿಆಲೋಚನೆಗಳುಮೂಡುತ್ತವೆ, ಅವುಗಳು ಮೂಢನಂಬಿಕೆಗಳಾಗದೆ ವೈಜ್ಞಾನಿಕ ಮನೋಭಾವದತ್ತ ಚಲಿಸಬೇಕು ಎಂದು ಇಸ್ರೋ ಮಾಜಿ ಅಧ್ಯಕ್ಷ ಎ.ಎಸ್.ಕಿರಣ್‌ಕುಮಾರ್‌ಹೇಳಿದರು.

ಸೂಲಿಬೆಲೆ ಉರ್ದು ಪ್ರೌಢಶಾಲೆ ಆವರಣದಲ್ಲಿ ಕರ್ನಾಟಕ ರಾಜ್ಯ ವೈಜ್ಞಾನಿಕ ವಿಜ್ಞಾನ ಪರಿಷತ್ ಹಮ್ಮಿಕೊಂಡಿದ್ದ ಕಾರ್ಮಿಕ ದಿನಾಚರಣೆ ಹಾಗೂ ಕಾಯಕ ಯೋಗಿ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಅವರು, ಪ್ರಗತಿಪರ ಚಿಂತನೆಗಳು ಮತ್ತು ವಿಜ್ಞಾನದ ಅಳವಡಿಕೆಯಿಂದ ಸಮಾಜದ ಬದಲಾವಣೆ ಮತ್ತು ದೇಶದ ಅಭಿವೃದ್ಧಿ ಸಾಧ್ಯ. ಈ ನಿಟ್ಟಿನಲ್ಲಿ ಹುಲಿಕಲ್ ನಟರಾಜ್ ಅವರ ಶ್ರಮ ಅನನ್ಯ ಎಂದು ಶ್ಲಾಘಿಸಿದರು.

ರಾಜ್ಯ ವೈಜ್ಞಾನಿಕ ವಿಜ್ಞಾನ ಪರಿಷತ್ ಸಂಸ್ಥಾಪಕ ಅಧ್ಯಕ್ಷ ಡಾ. ಹುಲಿಕಲ್ ನಟರಾಜ್ ಮಾತನಾಡಿ, ಯಾವುದೇ ಕ್ಷೇತ್ರದಲ್ಲಾಗಲಿ ಶ್ರಮ ಪಡುವ ವ್ಯಕ್ತಿಗಳನ್ನು ಕಾರ್ಮಿಕರು ಎಂದು ಪರಿಗಣಿಸುತ್ತಾರೆ. ಅವರ ಸೇವೆಯನ್ನು ಗುರುತಿಸಿ ಅವರನ್ನು ಅಭಿನಂದಿಸುವ ಕೆಲಸ ಸತತ 6 ವರ್ಷಗಳಿಂದ ನಮ್ಮ ಸಂಸ್ಥೆ ನಡೆಸಿಕೊಂಡು ಬಂದಿದ್ದು ನಮ್ಮ ಸಂಸ್ಥೆಯ ಎಲ್ಲಾ ಪಧಾದಿಧಿಕಾರಿಗಳ ಸಹಕಾರ ಅನನ್ಯ ಎಂದರು.

ವೈಜ್ಞಾನಿಕ ಪರಿಷತ್ ಗೌರವಾಧ್ಯಕ್ಷ ಡಾ.ಅಂಜಿನಪ್ಪ ಮಾತನಾಡಿ, ಕಾಯಕವೇ ಕೈಲಾಸ ಎಂಬ ಬಸವಣ್ಣನವರ ತತ್ವದಡಿ ಎಲ್ಲರೂ ಕಾಯಕವನ್ನೇ ಕೈಲಾಸ ಎಂದು ಪ್ರೀತಿಸಬೇಕು. ಪ್ರತಿಯೊಬ್ಬ ವ್ಯಕ್ತಿ ಉತ್ತಮ ಆಹಾರ ಸೇವಿಸುವ ಮೂಲಕ ಉತ್ತಮ ಆರೋಗ್ಯ ಪಡೆಯಬೇಕು ಎಂದು ನುಡಿದರು.

ಕಾರ್ಯಕ್ರಮದಲ್ಲಿ ರಾಜ್ಯ ಗೌರವ ಅಧ್ಯಕ್ಷ ಡಾ. ಆಂಜಿನಪ್ಪ, ಜಿಲ್ಲಾಧ್ಯಕ್ಷ ಎಂ.ಆರ್. ಉಮೇಶ್, ಉಪಾಧ್ಯಕ್ಷ ತರಬಹಳ್ಳಿ ಮಂಜುನಾಥ್, ಹೊಸಕೋಟೆ ತಾಲೂಕು ಅಧ್ಯಕ್ಷ ರವಿಕುಮಾರ್, ಹೋಬಳಿ ಅಧ್ಯಕ್ಷ ನಯಾಜ್ ಖಾನ್, ನೆಲಮಂಗಲ ತಾಲೂಕು ಅಧ್ಯಕ್ಷ ವಿಜಯಕುಮಾರ್, ದೇವನಹಳ್ಳಿ ತಾಲೂಕು ಅಧ್ಯಕ್ಷೆ ರಾಧಾ, ಸೂಲಿಬೆಲೆ ಸಹಕಾರ ಬ್ಯಾಂಕ್ ಸಿಇಒ ವಸಂತ ಕುಮಾರ್, ಸೈಯದ್ ಮಹಬೂಬ್, ಜಿಯಾವುಲ್ಲಾ, ಶಾಲಾ ಅಧ್ಯಕ್ಷ ಇನಾಯತ್ ಪಾಷಾ, ಸ್ಟುಡಿಯೋ ಆನಂದ್, ಮೊರಾರ್ಜಿ ದೇಸಾಯಿ ಪ್ರಾಂಶುಪಾಲ ವೆಂಕಟೇಶ್, ಡಾ.ಕಿರಣ್, ಸುನೀತಾ, ರಾಜೇಶ್ವರಿ, ಜಯಲಕ್ಷ್ಮೀ, ಪದ್ಮಾವತಿ ಪಾಲ್ಗೊಂಡಿದ್ದರು.



ಸೂಲಿಬೆಲೆ ಸರ್ಕಾರಿ ಉರ್ದು ಪ್ರೌಢಶಾಲೆಯಲ್ಲಿ ಆಯೋಜಿಸಿದ್ದ ಕಾಯಕ ಯೋಗಿ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಜಗಜ್ಯೋತಿ ಬಸವೇಶ್ವರರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿದರು. ಇಸ್ರೋ ಅಧ್ಯಕ್ಷ ಕಿರಣ್ ಕುಮಾರ್, ಡಾ ಹುಲಿಕಲ್ ನಟರಾಜ್, ಜಿಲ್ಲಾಧ್ಯಕ್ಷ ಎಂ.ಆರ್.ಉಮೇಶ್ ಇತರರಿದ್ದರು.

ಯುವತಿಗೆ ಹಣದ ಅಮಿಷವೊಡ್ಡಿ ಬೆತ್ತಲೆ ಫೋಟೋಗೆ ಪೀಡಿಸಿದ ವ್ಯಕ್ತಿ

ಪ್ರಕರಣ ದಾಖಲಾಗುತ್ತಿದ್ದಂತೆ ಆರೋಪಿ ಪರಾರಿ

• **ಕನ್ನಡಪ್ರಭ ವಾರ್ತೆ** ರಾಮನಗರ

ವ್ಯಕ್ತಿಯೊಬ್ಬ ಮಾಟಮಂತ್ರದ ಹೆಸರಿನಲ್ಲಿ ಯುವತಿಗೆ 30 ಲಕ್ಷ ರುಪಾಯಿ ಆಮಿಷವೊಡ್ಡಿ, ಬೆತ್ತಲೆಯಾಗಿ ಪೂಜೆಗೆ ಕುಳಿತುಕೊಳ್ಳುವಂತೆ ಒತ್ತಾಯಿಸಿ ಕಿರುಕುಳ ನೀಡಿರುವ ಘಟನೆಯೊಂದು ಬೆಳಕಿಗೆ ಬಂದಿದೆ.

ತಾಲೂಕಿನ ದೊಡ್ಡಮಣ್ಣುಗುಡ್ಡೆ ಗ್ರಾಮದ ಕಿರಣ್, ಪಕ್ಕದ ಮನೆಯ ಯುವತಿಗೆ ಹಣದ ಆಮಿಷವೊಡ್ಡಿ ಬೆತ್ತಲೆ ಫೋಟೋಗೆ ಪೀಡಿಸಿದವನು.

ಬೆಂಗಳೂರಿನಲ್ಲಿ ಕಾರು ಚಾಲಕನಾಗಿರುವ ಆರೋಪಿ ಕಿರಣ್, ಯುವತಿಗೆ ಮನಿ ಡಬ್ಲಿಂಗ್ ಮಾಡುವ ಪೂಜೆಗೆ ನಿನ್ನನ್ನು ಸೆಲೆಕ್ಟ್ ಮಾಡಬೇಕಾದರೆ ನೀನು ಬೆತ್ತಲೆ ಫೋಟೋ ಕಳಿಸಬೇಕು ಎಂದು ರಾತ್ರಿ ವೇಳೆ ಮೆಸೇಜ್ ಮಾಡುತ್ತಿದ್ದನು.

ಆ ಮೆಸೇಜ್‌ನಲ್ಲಿ ನಾನು ಬೆಂಗಳೂರಿನಲ್ಲಿ ವಿಶೇಷ ಪೂಜೆ ಮಾಡಿಸುತ್ತಿದ್ದೇನೆ. ಇದಕ್ಕೆ ಮೈಮೇಲೆ ಮಚ್ಚೆ ಇಲ್ಲದ ಮಹಿಳೆ ನಗ್ನವಾಗಿ ಕೂರಬೇಕು. ಆ ಪೂಜೆಗೆ ನಿನ್ನನ್ನು ಸೆಲೆಕ್ಟ್ ಮಾಡಲು ನಿನ್ನ ಬೆತ್ತಲೆ ಫೋಟೊ ಕಳುಹಿಸಬೇಕು. ಪೂಜೆ ಮುಗಿದ ಬಳಿಕ 30 ಲಕ್ಷ ರುಪಾಯಿ ಹಣ ಕೊಡುತ್ತೇನೆ ಎಂದು ಕಿರುಕುಳ ನೀಡುತ್ತಿದ್ದನು. ಇಷ್ಟೇ ಅಲ್ಲದೆ, ಇತರ ಕೆಲವು ಯುವತಿಯರ ಫೋಟೋಗಳನ್ನು ವಾಟ್ಸಾಪ್ ಮೂಲಕ ಕಳುಹಿಸಿ ನಂಬಿಸಲು ಯತ್ನಿಸಿದ್ದಾನೆ.

ಏಪ್ರಿಲ್ 12ರಂದು ಆರೋಪಿ ಕಿರಣ್ ಕರೆ ಮಾಡಿದ್ದಾನೆ. ಇದರಿಂದ ರೋಸಿಹೋದ ಯುವತಿ ಮತ್ತು ಅವರ ಕುಟುಂಬಸ್ಥರು ರಾಮನಗರ ಮಹಿಳಾ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ.

ಪ್ರಕರಣ ದಾಖಲಾಗಿರುವುದು ತಿಳಿದ ಕೂಡಲೇ ಆರೋಪಿ ಕಿರಣ್ ಗ್ರಾಮದಿಂದ ಪರಾರಿಯಾಗಿದ್ದಾನೆ. ಎರಡು ದಿನಗಳ ಹಿಂದೆ ಮಹಿಳಾ ಪೊಲೀಸ್ ಠಾಣೆಗೆ ದೂರು ನೀಡಿದರೂ ಆರೋಪಿಯನ್ನು ಇದುವರೆಗೂ ಬಂಧಿಸಿಲ್ಲ. ಕೂಡಲೇ ಆರೋಪಿ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಮಹಿಳೆ ಮನವಿ ಮಾಡಿದ್ದಾರೆ.

ಮಾಟ-ಮಂತ್ರದ ಹೆಸರಿನಲ್ಲಿ ಯುವತಿಯರನ್ನು ದುರ್ಬಳಕೆ ಮಾಡಿಕೊಳ್ಳುವ ಜಾಲದ ಶಂಕೆ ವ್ಯಕ್ತವಾಗಿದ್ದು, ಪೊಲೀಸರು ತೀವ್ರ ತನಿಖೆ ಕೈಗೊಂಡಿದ್ದಾರೆ.

ದೇವನಹಳ್ಳಿಯಲ್ಲಿ ಅದ್ದೂರಿ ಕರಗೋತ್ಸವ

ಶ್ರದ್ಧಾಭಕ್ತಿಯಿಂದ ನೆರವೇರಿಸಿದ ಮೌಕ್ತಿಕಾಂಭ ಅಮ್ಮನವರ ಹೂವಿನ ಕರಗ

• **ಕನ್ನಡಪ್ರಭ ವಾರ್ತೆ** ದೇವನಹಳ್ಳಿ

ಶ್ರೀ ಮೌಕ್ತಿಕಾಂಭ ಅಮ್ಮನವರ ದೇವಾಲಯದಲ್ಲಿ ಕರಗ ಮಹೋತ್ಸವ ಬುದ್ಧ ಪೂರ್ಣಿಮೆಯಂದು ಶ್ರದ್ಧಾಭಕ್ತಿಯಿಂದ ನೆರವೇರಿಸಲಾಯಿತು. ಪೂಜಾರಿ ಉಮೇಶ್ ಕರಗ ಹೊತ್ತು ದೇವಾಲಯದಿಂದ ಹೊರಟು ಪಟ್ಟಣದ ಪ್ರಮುಖ ರಸ್ತೆಗಳಲ್ಲಿ ಸಂಚರಿಸಿ ಬೆಳಿಗ್ಗೆ 9 ಗಂಟೆಗೆ ದೇವಾಲಯ ಪ್ರವೇಶಿಸಿತು.

ಕರಗದ ಪ್ರಯುಕ್ತ ಶ್ರೀ ಮೌಕ್ತಿಕಾಂಬ ಅಮ್ಮನವರಿಗೆ ವಿಶೇಷ ಹೂವಿನ ಅಲಂಕಾರ, ರಾಜಬೀದಿಗಳಲ್ಲಿ ರಾಜಗೋಪುರಕ್ಕೆ ಹೂವು ಹಣ್ಣು ಹಾಗೂ ದೀಪಾಲಂಕಾರ ಮಾಡಲಾಗಿತ್ತು. ಅಲಂಕಾರ, ನೊಡುಗರ ಗಮನ ಸೆಳೆಯುವಂತಿತ್ತು. ಪಟ್ಟಣದ ವಿವಿಧೆಡೆ ರಸ್ತೆಯುದ್ದಗಲಕ್ಕೂ ಹೂವಿನ ಹಾಸನ್ನು ಹಾಸಿ ಕರಗವನ್ನು ಅದ್ದೂರಿಯಾಗಿ ಸ್ವಾಗತಿಸಿದರು.

ಕರಗ ಮಹೋತ್ಸವ ಅಂಗವಾಗಿ ಇಡೀ ಪಟ್ಟಣದ ತುಂಬ ದೀಪಾಲಂಕಾರ ರಸ್ತೆಯ ಪ್ರಮುಖ ದ್ವಾರಗಳಲ್ಲಿ ಹೂವಿನ ಬೋರ್ಡುಗಳು ಹಾಗೂ ಹಳೆ ಬಸ್ ನಿಲ್ದಾಣದಲ್ಲಿ ಪೌರಾಣಿಕ ನಾಟಕ ನಡೆಯಿತು. ಕರಗವನ್ನು ವೀಕ್ಷಿಸಲು ಸುತ್ತಮುತ್ತಲ ಜಿಲ್ಲೆಗಳಿಂದ ಸಾವಿರಾರು ಭಕ್ತರು ಆಗಮಿಸಿದ್ದರು. ಇಡೀ ರಾತ್ರಿ ಜನ ಕರಗ ಬರುವುದನ್ನು ವೀಕ್ಷಿಸಲು ಮನೆಗಳ ಮುಂದೆ ನೀರು ಹಾಕಿ ರಂಗೋಲಿ ಬಿಡಿಸಿ ಕಾದು ಕುಳಿತಿದ್ದರು. ಪಟ್ಟಣದ ಗ್ರಾಮದೇವತೆಗಳಿಗೆ ಪಲ್ಲಕ್ಕಿ ಉತ್ಸವಗಳು ನಡೆಯಿತು.

ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಚ್.ಮುನಿಯಪ್ಪ ಮೌಕ್ತಿಕಾಂಬ ದೇವಾಲಯದಲ್ಲಿ ವಿಶೇಷ ಪೂಜೆ ಸಲ್ಲಿಸಿದರು. ಬಯಪಾ ಅಧ್ಯಕ್ಷ ಶಾಂತಕುಮಾರ್, ಸದಸ್ಯ ಪ್ರಸನ್ನಕುಮಾರ್, ಪುರಸಭೆ ಮಾಜಿ ಸ್ಥಾಯಿ ಸಮಿತಿ ಅಧ್ಯಕ್ಷ ಚಂದ್ರಪ್ಪ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮಂಜುನಾಥ್, ಮೌಕ್ತಿಕಾಂಭ ದೇವಾಲಯದ ಅಧ್ಯಕ್ಷ ನಾಗರಾಜ್ ಇತರರು ಪಾಲ್ಗೊಂಡಿದ್ದರು.



ಪ್ರತಿ ಗ್ರಾಮದಲ್ಲೂ ಕುಡಿವ ನೀರಿನ ಘಟಕ ಅವಶ್ಯ

• **ಕನ್ನಡಪ್ರಭ ವಾರ್ತೆ** ದಾಬಸ್‌ಪೇಟೆ

ಗ್ರಾಮೀಣರ ಆರೋಗ್ಯ ದೃಷ್ಟಿಯಿಂದ ಸ್ಥಳೀಯ ಕೈಗಾರಿಕೆಗಳ ಸಹಕಾರದಲ್ಲಿ ಪ್ರತಿ ಗ್ರಾಮದಲ್ಲಿಯೂ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪನೆ ಮಾಡುತ್ತಿದ್ದೇವೆಂದು ಶಾಸಕ ಶ್ರೀನಿವಾಸ್‌ಹೇಳಿದರು.

ಟಿ.ಬೇಗೂರು ಗ್ರಾಪಂ ವ್ಯಾಪ್ತಿಯ ಕಂಬಯ್ಯನಪಾಳ್ಯ ಗ್ರಾಮದಲ್ಲಿ ಎಸಿಇ ಮಲ್ಟಿ ಆಕ್ಸಿಸ್ ಸಿಸ್ಟಮ್ ಪ್ರೈವೇಟ್ ಕಂಪನಿ ಸಿಎಸ್‌ಆರ್‌ಅನುದಾನದಲ್ಲಿ ನಿರ್ಮಿಸಿದ್ದ ಶುದ್ಧ ಕುಡಿಯುವ ನೀರಿನ ಘಟಕವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಶುದ್ದ ಕುಡಿಯುವ ನೀರಿನ ಘಟಕದ ಸುತ್ತ ಸ್ವಚ್ಛತೆ ಕಾಪಾಡಿಕೊಂಡು ನಿರ್ವಹಣೆ ಮಾಡಿದ್ದಲ್ಲಿ ಗ್ರಾಮಸ್ಥರು ಆರೋಗ್ಯಯುತ ಜೀವನ ನಡೆಸಬಹುದು. ಈಗಾಗಲೇ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಗಡಿ ಗ್ರಾಮಗಳಲ್ಲಿ ಸ್ಥಳೀಯ ಶಾಸಕರ ಅನುದಾನದಲ್ಲಿ ಶುದ್ದನೀರಿನ ಘಟಕಗಳನ್ನು ನಿರ್ಮಿಸಲು ಕ್ರಮವಹಿಸಲಾಗಿದೆ ಎಂದು ತಿಳಿಸಿದರು.

ಎನ್‌ಪಿಎ ಅಧ್ಯಕ್ಷ ಎಂ.ಕೆ.ನಾಗರಾಜು ಮಾತನಾಡಿ, ಪ್ರತಿ ಗ್ರಾಮಗಳಲ್ಲಿಯೂ ಘಟಕಗಳನ್ನು ನಿರ್ಮಿಸಿ ಶುದ್ದ ಕುಡಿಯುವ ನೀರು ಒದಗಿಸಬೇಕೆಂದು ನಮ್ಮ ಶಾಸಕರಿಗೆ ಮನವಿ ಮಾಡಿದ ತಕ್ಷಣ ನೀರಿನ ಘಟಕಗಳನ್ನು ಸ್ಥಾಪಿಸಿ ಜನತೆಗೆ ಅನುಕೂಲ ಮಾಡಿಕೊಡುತ್ತಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಪಿಡಿಒ ಮೋಹನ್ ಕುಮಾರ್, ವಕೀಲ ನಾರಾಯಣಗೌಡ, ಗ್ರಾಪಂಮಾಜಿಸದಸ್ಯರಾದಮುಖಂಡರಾದ ಮುನಿರಾಮು, ವೆಂಕಟೇಶ್, ಗ್ರಾಮಸ್ಥರು, ಕಂಪನಿಯ ಆಡಳಿತ ಮಂಡಳಿ ಹಾಗೂ ಸಿಬ್ಬಂದಿ ವರ್ಗ ಉಪಸ್ಥಿತರಿದ್ದರು.



ಟಿ.ಬೇಗೂರು ಗ್ರಾಪಂ ವ್ಯಾಪ್ತಿಯ ಕಂಬಯ್ಯನಪಾಳ್ಯ ಗ್ರಾಮದಲ್ಲಿ ಎಸಿಇ ಮಲ್ಟಿ ಆಕ್ಸಿಸ್ ಸಿಸ್ಟಮ್ ಪ್ರೈವೇಟ್ ಕಂಪನಿ ವತಿಯಿಂದ ಸಿಎಸ್‌ಆರ್‌ಅನುದಾನದಲ್ಲಿ ನಿರ್ಮಿಸಿದ್ದ ಶುದ್ಧ ಕುಡಿಯುವ ನೀರಿನ ಘಟಕವನ್ನು ಶಾಸಕ ಎನ್.ಶ್ರೀನಿವಾಸ್ ಉದ್ಘಾಟಿಸಿದರು.

ಪಿಯು ವಿದ್ಯಾರ್ಥಿಗಳ ಶುಲ್ಕ ಭರಿಸುವೆ: ಶಾಸಕ

ದಾಬಸ್‌ಪೇಟೆ: ಸರ್ಕಾರಿ ಪದವಿ ಪೂರ್ವ ಕಾಲೇಜಗಳಿಗೆ ಪ್ರಥಮ ಹಾಗೂ ದ್ವಿತೀಯ ಪಿಯುಸಿಗೆ ದಾಖಲಾಗುವ ವಿದ್ಯಾರ್ಥಿಗಳ ಪ್ರವೇಶ ಶುಲ್ಕವನ್ನು ಶಾಸಕ ಶ್ರೀನಿವಾಸ್ ಪಾವತಿಸುವುದಾಗಿ ಘೋಷಿಸಿದ್ದಾರೆ. ನೆಲಮಂಗಲದ ಸರ್ಕಾರಿ ಪಿಯು ಕಾಲೇಜು, ತ್ಯಾಮಗೊಂಡ್ಲು ಸರ್ಕಾರಿ ಪಿಯು ಕಾಲೇಜು, ಯಂಟಗಾನಹಳ್ಳಿ ಸರ್ಕಾರಿ ಪಿಯು ಕಾಲೇಜು ಸೇರಿದಂತೆ ತಾಲೂಕಿನ ಎಲ್ಲಾ ಸರ್ಕಾರಿ ಪಿಯು ಕಾಲೇಜುಗಳಿಗೆ ದಾಖಲಾಗುವ ವಿದ್ಯಾರ್ಥಿಗಳ ಪ್ರವೇಶ ಶುಲ್ಕ ಪಾವತಿ ಮಾಡುವುದಾಗಿ ಘೋಷಿಸಿದ್ದಾರೆ.

ರಸ್ತೆ ವ್ಯಾಜ್ಯ ಬಗೆಹರಿಸಿ | ನಾಲ್ಕೈದು ಗ್ರಾಮಗಳಿಗೆ ತೊಂದರೆ: ಅಧಿಕಾರಿಗಳ ವಿರುದ್ಧ ಸುತ್ತಮುತ್ತಲ ರೈತರ ಆಕ್ರೋಶ

ರಸ್ತೆಯಲ್ಲಿ ಗುಂಡಿ: ಸಮಸ್ಯೆ ಬಗೆಹರಿಸುವಂತೆ ಗ್ರಾಮಸ್ಥರ ಪ್ರತಿಭಟನೆ

• **ಕನ್ನಡಪ್ರಭ ವಾರ್ತೆ** ದಾಬಸ್‌ಪೇಟೆ

ಸುಮಾರು 70 ವರ್ಷಗಳಿಂದ ಸಾರ್ವಜನಿಕರು ಓಡಾಡುತ್ತಿದ್ದ ರಸ್ತೆಯನ್ನು ಅಗೆದು ಖಾಸಗಿ ವ್ಯಕ್ತಿಗಳು ಸಂಚಾರಕ್ಕೆ ಅಡಚಣೆ ಉಂಟು ಮಾಡುತ್ತಿದ್ದಾರೆಂದು ಆರೋಪಿಸಿ ಕನಸಂದ್ರ ಸೇರಿದಂತೆ ಸುತ್ತಮುತ್ತಲಿನ ಐದಾರು ಗ್ರಾಮಸ್ಥರು ಪ್ರತಿಭಟನೆ ನಡೆಸಿ ಸಂಬಂಧಪಟ್ಟವರು ಸಮಸ್ಯೆ ಪರಿಹರಿಸಬೇಂದು ಒತ್ತಾಯಿಸಿದರು.

ಪರ್ವತನಪಾಳ್ಯದ ಪ್ರಸಾದ್ ಮಾತನಾಡಿ, 1995ರಲ್ಲಿಯೇ ಲಕ್ಕೇನಹಳ್ಳಿ ಗ್ರಾಮ ಪಂಚಾಯಿತಿಯ ಅನುದಾನದಲ್ಲಿ ಈ ರಸ್ತೆ ನಿರ್ಮಾಣವಾಗಿದ್ದು, ಸರ್ಕಾರಿ ಅನುದಾನದಲ್ಲಿ ಚರಂಡಿ ಸಹ ನಿರ್ಮಿಸಿದ್ದಾರೆ. ಅದಲ್ಲದೆ ರಾಮಕೃಷ್ಣ ಹೆಗ್ಗಡೆ ಅವರು ಮುಖ್ಯಮಂತ್ರಿಯಾಗಿದ್ದ ಅವಧಿಯಲ್ಲಿ ಈ ರಸ್ತೆ ಬದಿಯಲ್ಲಿ ವಿದ್ಯುತ್ ಕಂಬಗಳನ್ನು ಅಳವಡಿಸಲಾಗಿತ್ತು. ನಮ್ಮ ತಾತನ ಕಾಲದಿಂದಲೂ ಇದೇ ರಸ್ತೆಯಲ್ಲಿಯೇ ಓಡಾಡುತ್ತಿದ್ದೆವು. ಆದರೆ ಕೆಂಪರಾಮಯ್ಯ ಎಂಬುವರ ಮೊಮ್ಮಕ್ಕಳು ಈಗ ಏಕಾಏಕಿ ಇಲ್ಲಿಗೆ ಬಂದು ಇದು ನಮ್ಮ ಜಮೀನು ಎಂದು ಹೇಳಿ ರಸ್ತೆಗೆ ತೆರಳುವ ದಾರಿಯಲ್ಲಿ ಗುಂಡಿ ತೆಗೆದು ಮನೆ ಕಟ್ಟಲು ಸೈಜ್ ಕಲ್ಲುಗಳನ್ನು ಹಾಕಿ ಗ್ರಾಮಸ್ಥರಿಗೆ ತೊಂದರೆ ಮಾಡಿದ್ದಾರೆ ಎಂದು ದೂರಿದರು.

ತುಪ್ಪದಹಳ್ಳಿ, ವಡ್ಡರಹಳ್ಳಿ, ಚಿಕ್ಕನಹಳ್ಳಿ, ಪರ್ವತನಪಾಳ್ಯ ಹಾಗೂ ಕನ್ನಸಂದ್ರ ಗ್ರಾಮಗಳಿಗೆ ಇದೇ ರಸ್ತೆಯಲ್ಲೇ ಓಡಾಡಬೇಕು. ಶಾಲಾ ಕಾಲೇಜಿಗೆ, ಆಸ್ಪತ್ರೆಗೆ ತೆರಳಲು, ಹಾಲು ಉತ್ಪಾದಕರು ಡೇರಿಗೆ ಹಾಲು ಹಾಕಲು ಇದೇ ರಸ್ತೆಯನ್ನು ಬಳಸುತ್ತಿದ್ದು, ಸಾವಿರಾರು ರೈತರಿಗೆ ಈ ರಸ್ತೆ ಅನುಕೂಲವಾಗಿದೆ. ಆದರೆ ಇದೀಗ ರಸ್ತೆಯಲ್ಲಿ ಮನೆ ನಿರ್ಮಿಸುವುದರಿಂದ 5 ಗ್ರಾಮದ ರೈತರಿಗೆ ಸಮಸ್ಯೆಯಾಗುತ್ತಿದೆ ಎಂದು ಹೇಳಿದರು.

ಗ್ರಾಮಸ್ಥ ರಾಜಣ್ಣ ಮಾತನಾಡಿ, ರಸ್ತೆಯನ್ನು ಅಗೆದಿರುವ ಬಗ್ಗೆ ಪೊಲೀಸರಿಗೆ ದೂರು ನೀಡಿದ್ದು, ಇದು ಕಂದಾಯ ಇಲಾಖೆ ವ್ಯಾಪ್ತಿಗೆ ಬರುವುದರಿಂದ ತಹಸೀಲ್ದಾರ್ ಅವರಿಗೆ ದೂರು ನೀಡಿ ಎನ್ನುತ್ತಾರೆ. ಲಕ್ಕೇನಹಳ್ಳಿ ಗ್ರಾಮ ಪಂಚಾಯಿತಿ ಪಿಡಿಒ ನಾಗರಾಜ್ ಎನ್ನುವವರ ಗಮನಕ್ಕೆ ತಂದಿದ್ದು, ಅವರು ಸಹ ಇದು ಸಿವಿಲ್ ವ್ಯಾಜ್ಯ ನೀವೇ ಬಗೆಹರಿಸಿಕೊಳ್ಳಿ, ಅದಕ್ಕೂ ನಮಗೂ ಸಂಬಂಧವಿಲ್ಲ ಎನ್ನುವ ಹಾರಿಕೆಉತ್ತರ ನೀಡುತ್ತಾರೆ ಎಂದರು.

ರೈತ ನೀಲಕಂಠಯ್ಯ ಮಾತನಾಡಿ, ಗೊರೂರಿನಲ್ಲಿ ನಾಟಿ ಹಸು ಹಾಲಿನ ಡೇರಿ ಇದ್ದು, ಪರ್ವತನಪಾಳ್ಯ, ಕನ್ನಸಂದ್ರ, ಚಿಕ್ಕನಹಳ್ಳಿ ರೈತರು ಹಾಲನ್ನು ಇದೇ ಡೇರಿಗೆ ಹಾಕುತ್ತಿದ್ದು, ಈಗ ರಸ್ತೆ ಅಗೆದಿರುವುದರಿಂದ ಸುತ್ತು ಬಳಸಿಕೊಂಡು ಬಂದು ಡೇರಿಗೆ ಹಾಲು ಹಾಕಬೇಕಾಗುತ್ತಿದೆ. ಅಲ್ಲದೇ ವೇಳೆ ವೃದ್ಧರು, ಮಹಿಳೆಯರು ಗ್ರಾಮಗಳಿಗೆ ಬರಲು ಆಟೋ ಮುಂತಾದ ವಾಹನಗಳಿಗೆ ರಸ್ತೆ ಇಲ್ಲದ ಕಾರಣ ಬಹಳಷ್ಟು ಸಮಸ್ಯೆ ಆಗುತ್ತಿದೆ. ಸಂಬಂಧಪಟ್ಟ ಅಧಿಕಾರಿಗಳು ಸ್ಥಳಕ್ಕೆ ಬಂದು ರಸ್ತೆಯಲ್ಲಿ ತೋಡಿರುವ ಗುಂಡಿಯನ್ನು ಮುಚ್ಚಿಸಿ ರೈತರಿಗೆ ಅನುಕೂಲ ಮಾಡಿಕೊಡಬೇಕು ಎಂದು ಮನವಿ ಮಾಡಿದರು.

ಪ್ರತಿಭಟನೆಯಲ್ಲಿ ಗ್ರಾಮಸ್ಥರಾದ ಗಿರೀಶ್, ಸದಾಶಿವಯ್ಯ, ಸಿದ್ದಗಂಗಯ್ಯ, ಮಲ್ಲೇಶ್ ಮತ್ತಿತರರು ಪಾಲ್ಗೊಂಡಿದ್ದರು.



ಕನ್ನಸಂದ್ರ ಗ್ರಾಮಕ್ಕೆ ಸಂಪರ್ಕ ಕಲ್ಪಿಸುವ ರಸ್ತೆ ಸಮಸ್ಯೆಯನ್ನು ಬಗೆಹರಿಸಬೇಕೆಂದು ಒತ್ತಾಯಿಸಿ ಸುತ್ತಮುತ್ತ ಗ್ರಾಮಗಳ ರೈತರು ಪ್ರತಿಭಟನೆ ನಡೆಸಿದರು.